ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 83

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 06-03-2026

**SEHRI & IFTARI TIME**

**DAY : FRIDAY**

**RAMZAN : 16**

**DATE: 06.03.2026**

**END TIME OF SEHRI :5:21 AM**

**FAJAR AZAAN : 5:26 AM**

**IFTAR TIME : 6:31 PM**



ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ
ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ
ದಿನಪತ್ರಿಕೆ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

# ಸಿಎಂ ಕುರ್ಚಿ ಕಿತ್ತಾಟದ ನಡುವೆಯೂ ಇಂದು ದಾಖಲೆಯ ಬಜೆಟ್ ಮಂಡಿಸಲಿರುವ ಸಿದ್ದರಾಮಯ್ಯ

**ಬೆಂಗಳೂರು, ಮಾ.5–** ಅಧಿಕಾರ ಹಂಚಿಕೆಯ ಗೊಂದಲದ ನಡುವೆಯೂ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ತಮ್ಮ 17ನೇ ದಾಖಲೆಯ ಬಜೆಟ್ ಮಂಡಿಸುತ್ತಿದ್ದು, ಶಿಕ್ಷಣ, ನೀರಾವರಿ, ಪಶು ಸಂಗೋಪನೆ, ಕೃಷಿ ಮತ್ತು ಆರೋಗ್ಯ ಕ್ಷೇತ್ರಗಳಿಗೆ ಆದ್ಯತೆ ನೀಡುವ ಮುನ್ಸೂಚನೆ ದೊರೆತ್ತಿದೆ.

ನಾಯಕತ್ವದ ಗೊಂದಲದಿಂದಾಗಿ ತಡವಾಗಿ ಬಜೆಟ್ ತಯಾರಿಕೆಯ ಪ್ರಕ್ರಿಯೆಗಳನ್ನು ಆರಂಭಿಸಿದ್ದ ಸಿದ್ದರಾಮಯ್ಯ ಅವರು, ಎಂದಿನಂತೆ ರೈತ ಸಂಘಟನೆಗಳು, ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಸಮುದಾಯಗಳು, ಕೈಗಾರಿಕೆಗಳಿಗೆ ಸಂಬಂಧಪಟ್ಟ ಸಂಸ್ಥೆಗಳು ಸೇರಿದಂತೆ ವಿವಿಧ ವಲಯಗಳ ಜೊತೆ ಚರ್ಚೆ ನಡೆಸಿದ್ದಾರೆ.

5 ಗ್ಯಾರಂಟಿಗಳಿಗೆ ಕಳೆದ ವರ್ಷ 56 ಸಾವಿರ ಕೋಟಿ ರೂ.ಗಳನ್ನು ಬಜೆಟ್‌ನಲ್ಲಿ ಮೀಸಲ್ಪಟ್ಟಿರುವುದಾಗಿ ಘೋಷಿಸಲಾಗಿತ್ತು. ಅದು ಬಹುತೇಕ ಖರ್ಚಾಗಿದೆ. ಆದರೆ ಆ ಅನುದಾನದ ಜೊತೆ ಎಸ್‌ಇಪಿ, ಟಿಎಸ್‌ಪಿಯಡಿ ನಿಗದಿಯಾಗಿದ್ದ 14 ಸಾವಿರ ಕೋಟಿ



ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿಕೊಳ್ಳಲಾಗಿದೆ.

56 ಸಾವಿರ ಕೋಟಿಗಳ ನಿಗದಿತ ಅನುದಾನದ ಜೊತೆಗೆ ಹೆಚ್ಚುವರಿಯಾಗಿ 14ಸಾವಿರ ಕೋಟಿ ರೂ. ಬಳಕೆ ಮಾಡಿರುವುದರಿಂದಾಗಿ ಗ್ಯಾರಂಟಿ ಯೋಜನೆಗಳಿಗೆ ಒಟ್ಟು 70ಸಾವಿರ ಕೋಟಿ ರೂ.ಗಳು ಖರ್ಚಾಗಿದೆಯೇ ಎಂಬ ಅನುಮಾನಗಳು ಕಾಡಲಾರಂಭಿಸಿವೆ.

ಗ್ಯಾರಂಟಿ ಯೋಜನೆಗಳ ವೆಚ್ಚವನ್ನು ಅಂದಾಜಿಸುವಲ್ಲಿ ಆಯಾ ಇಲಾಖೆಗಳು ತಪ್ಪಿವೆಯೇ? ಎಂಬ ಅನುಮಾನಗಳು ಕಾಡುತ್ತಿದೆ. ಈ ನಿಟ್ಟಿನಲ್ಲಿ ಸಿದ್ದರಾಮಯ್ಯ ಅವರು ಪ್ರಸಕ್ತ ಬಜೆಟ್ ತಯಾರಿಕೆಯ ವೇಳೆ ಪ್ರತಿಯೊಂದು ಅಂಕಿ–ಅಂಶಗಳನ್ನು ಖುದ್ದಾಗಿ ತಾವೇ ಪರಿಶೀಲಿಸಿದ್ದು, ಗ್ಯಾರಂಟಿ ಯೋಜನೆಗಳಿಗೆ ಮುಂದಿನ ಬಜೆಟ್‌ನಲ್ಲಿ 60ಸಾವಿರ ಕೋಟಿ ರೂ.ಗಳಿಗೂ ಮೀರಿದ ಅನುದಾನ ನಿಗದಿ ಮಾಡಬೇಕಾದ ಒತ್ತಡದಲ್ಲಿ ಸಿಲುಕಿದ್ದಾರೆ.ಬಹುಕಾಲದ ಬೇಡಿಕೆಯಾಗಿರುವ ಆಲಮಟ್ಟಿ ಅಣೆಕಟ್ಟು ಎತ್ತರದ ಯೋಜನೆಗೆ ಭೂ ಸ್ವಾಧೀನ ಪ್ರಕ್ರಿಯೆಗಾಗಿಯೇ 70 ಸಾವಿರ ಕೋಟಿ ರೂ.ಗಳ ಅನುದಾನ ಅಗತ್ಯ ಇದೆ. ಈ ಬಾರಿಯ ಬಜೆಟ್‌ನಲ್ಲಿ ಸುಮಾರು 10 ಸಾವಿರ ಕೋಟಿ ರೂ.ಗಳನ್ನು ಘೋಷಿಸುವ ಸಾಧ್ಯತೆ ಇದೆ.

ಆರೋಗ್ಯ ಇಲಾಖೆ ವತಿಯಿಂದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸ್ಕ್ಯಾನಿಂಗ್, ಎಂಆರ್‌ಐ ಯಂತ್ರಗಳನ್ನು ಸರ್ಕಾರ ತನ್ನದೇ ವೆಚ್ಚದಲ್ಲಿ ಅಳವಡಿಸಲು ಚರ್ಚೆಗಳು ನಡೆದಿದ್ದವು. ಜೊತೆಗೆ ಸುವರ್ಣಕರ್ನಾಟಕ ಆರೋಗ್ಯ ವಿಮಾ ಯೋಜನೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ 2ನೇಪುಟಕ್ಕೆ►

# ಎಚ್.ಪಿ. ಗ್ಯಾಸ್ ಗ್ರಾಹಕರಿಗೆ ಪ್ರಮುಖ ಸೂಚನೆ ಇನ್ಮುಂದೆ ಬುಕಿಂಗ್ ಮತ್ತು ಓಟಿಪಿ ಕಡ್ಡಾಯ!




ಧೈರ್ಯದ ದಾರಿ

**ಸಿರವಾರ:** ಸ್ಥಳೀಯ ಎಚ್.ಪಿ. ಗ್ಯಾಸ್ ಏಜೆನ್ಸಿಯು ತನ್ನ ಗ್ರಾಹಕರಿಗೆ ಅತ್ಯಂತ ಪ್ರಮುಖ ಮಾಹಿತಿಯೊಂದನ್ನು ನೀಡಿದ್ದು, ಗ್ಯಾಸ್ ವಿತರಣಾ ಕ್ರಮದಲ್ಲಿ ಮಹತ್ವದ ಬದಲಾವಣೆ ತಂದಿದೆ. ಕಂಪನಿಯ ನಿಯಮದಂತೆ ಇನ್ಮುಂದೆ ಪ್ರತಿಯೊಬ್ಬ ಗ್ರಾಹಕರು ಗ್ಯಾಸ್ ರಿಫಿಲ್ ಪಡೆಯಲು ಡಿಜಿಟಲ್ ಸುರಕ್ಷತಾ ಕ್ರಮಗಳನ್ನು ಅನುಸರಿಸುವುದು ಕಡ್ಡಾಯವಾಗಿದೆ.

ವರದಿಯ ಮುಖ್ಯಾಂಶಗಳು:

**ನೊಂದಾಯಿತ ಸಂಖ್ಯೆಯಿಂದಲೇ ಬುಕಿಂಗ್:** ಗ್ರಾಹಕರು ತಮ್ಮ ಗ್ಯಾಸ್ ಸಿಲಿಂಡರ್ ಪಡೆಯಲು ಕಡ್ಡಾಯವಾಗಿ ತಮ್ಮ ನೊಂದಾಯಿತ ಮೊಬೈಲ್ ಸಂಖ್ಯೆಯಿಂದಲೇ (Registered Mobile Number) ಬುಕಿಂಗ್ ಮಾಡಿರಬೇಕು.

**ಓಟಿಪಿ (OTP) ಕಡ್ಡಾಯ:** ಸಿಲಿಂಡರ್ ವಿತರಣೆಯ ಸಂದರ್ಭದಲ್ಲಿ ಗ್ರಾಹಕರ ಮೊಬೈಲ್‌ಗೆ ಬರುವ ಓಟಿಪಿ ಸಂಖ್ಯೆಯನ್ನು ವಿತರಣಾ ಸಿಬ್ಬಂದಿಗೆ ನೀಡಬೇಕು. ಒಂದು ವೇಳೆ ಓಟಿಪಿ ನೀಡದಿದ್ದಲ್ಲಿ ಗ್ಯಾಸ್ ರಿಫಿಲ್ ನೀಡಲಾಗುವುದಿಲ್ಲ ಎಂದು ಏಜೆನ್ಸಿ ಸ್ಪಷ್ಟಪಡಿಸಿದೆ.

**ಪಾರದರ್ಶಕತೆಗಾಗಿ ಹೊಸ ನಿಯಮ:** ಗ್ಯಾಸ್ ವಿತರಣೆಯಲ್ಲಿ ಅಕ್ರಮಗಳನ್ನು ತಡೆಯಲು ಮತ್ತು ಅರ್ಹ ಗ್ರಾಹಕರಿಗೆ ಸರಿಯಾದ ಸಮಯಕ್ಕೆ ಸಿಲಿಂಡರ್ ತಲುಪುವಂತೆ ಮಾಡಲು ಕಂಪನಿಯು ಈ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ.

**ಗ್ರಾಹಕರಿಗೆ ಏಜೆನ್ಸಿಯ ಸಲಹೆ:** ಗ್ಯಾಸ್ ಬುಕಿಂಗ್ ಮಾಡಿದ ತಕ್ಷಣ ನಿಮ್ಮ ಮೊಬೈಲ್‌ಗೆ ಬರುವ ಸಂದೇಶವನ್ನು (SMS) ಜಾಗರೂಕತೆಯಿಂದ ಇಟ್ಟುಕೊಳ್ಳಿ. ವಿತರಣಾ ಸಿಬ್ಬಂದಿ ಮನೆಗೆ ಬಂದಾಗ ಆ ಸಂದೇಶದಲ್ಲಿರುವ ಓಟಿಪಿ ಸಂಖ್ಯೆಯನ್ನು ತೋರಿಸಿ ನಿಮ್ಮ ಸಿಲಿಂಡರ್ ಪಡೆದುಕೊಳ್ಳಲು ಕೋರಲಾಗಿದೆ.

**ವಿಶೇಷ ಸೂಚನೆ:** ನಿಮ್ಮ ಮೊಬೈಲ್ ಸಂಖ್ಯೆ ಇನ್ನೂ ಗ್ಯಾಸ್ ಕನೆಕ್ಷನ್‌ಗೆ ಲಿಂಕ್ ಆಗದಿದ್ದರೆ ಅಥವಾ ಫೋನ್ ನಂಬರ್ ಬದಲಾಗಿದ್ದರೆ, ತಕ್ಷಣವೇ ಸಿರವಾರದ ಎಚ್.ಪಿ. ಗ್ಯಾಸ್ ಕಚೇರಿಗೆ ಭೇಟಿ ನೀಡಿ ಮಾಹಿತಿ ಅಪ್‌ಡೇಟ್ ಮಾಡಿಕೊಳ್ಳಲು ತಿಳಿಸಲಾಗಿದೆ

# ಖಾಸಗಿ ಶಾಲೆಗಳಲ್ಲಿ ವಾರ್ಷಿಕ ಶುಲ್ಕ ಶೇ.10 ಹೆಚ್ಚಳ: ಕ್ಯಾಮ್ಸ್ ಸಂಘ ಸುಳಿವು

## ವಿದ್ಯುತ್, ನೀರಿನ ಬಿಲ್, ವೇತನ ಹೆಚ್ಚಳದಿಂದ ಅನಿವಾರ್ಯ

ಧೈರ್ಯದ ದಾರಿ



**ಬೆಂಗಳೂರು:** ಖಾಸಗಿ ಶಾಲೆಗಳು ವಾರ್ಷಿಕ ಶೇ.7ರಿಂದ 10ರಷ್ಟು ಶುಲ್ಕ ಹೆಚ್ಚಳ ಮಾಡುವುದು ಅನಿವಾರ್ಯ ಎಂದು ಖಾಸಗಿ ಶಾಲೆ ಆಡಳಿತ ಮಂಡಳಿ (ಕ್ಯಾಮ್ಸ್) ಪ್ರಧಾನ ಕಾರ್ಯದರ್ಶಿ ಡಿ.ಶಶಿಕುಮಾರ್ ತಿಳಿಸಿದ್ದಾರೆ. ಈ ಮೂಲಕ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಪೋಷಕರಿಗೆ ಖಾಸಗಿ ಶಾಲೆಗಳಿಂದ ಶುಲ್ಕದ ಹೊರೆ ಬೀಳಬಹುದು ಎಂಬ ಸುಳಿವು ನೀಡಿದ್ದಾರೆ.

ಶುಲ್ಕ ವಿಚಾರವಾಗಿ ಮಾಧ್ಯಮಗಳಿಗೆ ಹೇಳಿಕೆ ನೀಡಿರುವ ಅವರು, ಖಾಸಗಿ ಶಾಲೆಗಳಿಗೆ ವಿದ್ಯುತ್, ನೀರಿನ ಬಿಲ್, ವೇತನ ಹೆಚ್ಚಳ, ವಿಮೆ, ಮೂಲಸೌಕರ್ಯ ಕಲ್ಪಿಸು ವುದು ಸೇರಿ ಪ್ರತಿಯೊಂದರಲ್ಲಿಯೂ ಬೆಲೆ ಹೆಚ್ಚಳವಾಗುತ್ತಿದೆ. ಈ ಕಾರಣಕ್ಕೆ ಹೆಚ್ಚಳ ಮಾಡಬೇಕಿದೆ ಎಂದು ತಿಳಿಸಿದ್ದಾರೆ. ಸಾಮಾನ್ಯವಾಗಿ ಎಲ್ಲರೂ ಶುಲ್ಕ ಹೆಚ್ಚಳ ಮಾಡು ತ್ತಾರೆ. ಕೆಲವೊಬ್ಬರು ಮಾಡದಿರ ಬಹುದು. ಆದರೆ, ರಾಜ್ಯದಲ್ಲಿ: 25 ಸಾವಿರಕ್ಕೂ ಹೆಚ್ಚಿನ ಅನಧಿಕೃತ ನರ್ಸರಿ ಶಾಲೆಗಳು ಹಾಗೂ ಇತರೆ ಶಾಲೆಗಳು ನಡೆ ಯುತ್ತಿವೆ. ಇವುಗಳ ನಡುವೆ ಅಧಿಕೃತವಾಗಿ ಶಾಲೆಗಳನ್ನು ನಡೆಸುವುದುಕಷ್ಟಸಾಧ್ಯವಾಗಿದೆ. ಈ ಕಾರಣಕ್ಕೆ ಶುಲ್ಕ ಹೆಚ್ಚಳ ಮಾಡಲಾಗುತ್ತದೆ ಎಂದು ಅವರು ಸಮರ್ಥಿಸಿಕೊಂಡಿದ್ದಾರೆ.

# ಸಂವಿಧಾನದ ಮೌಲ್ಯಗಳನ್ನು ಎತ್ತಿ ಹಿಡಿಯುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ-- ಡಾ. ಬಸವರಾಜ ಕರಡಿಗುಡ್ಡ



ಧೈರ್ಯದ ದಾರಿ

**ಮಾನ್ವಿ–**ತಾಲೂಕಿನ ಕರಡಿ ಗುಡ್ಡ ಗ್ರಾಮದಲ್ಲಿ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದ ವತಿಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ಶಿಬಿರದ ಎರಡನೇ ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ದೇಶಿ ಮಾತನಾಡಿದ ವಿಶೇಷ ಉಪನ್ಯಾಸಕರಾದ ಡಾ. ಬಸವರಾಜ್ ಕರಡಿಗುಡ್ಡ ಇವರು ಸಂವಿಧಾನದ ಮೌಲ್ಯಗಳನ್ನು, ತತ್ವಗಳನ್ನು, ಆಶಯಗಳನ್ನು ಎತ್ತಿ ಹಿಡಿಯುವುದು ಭಾರತೀಯ ಪ್ರಜೆಯ ಪ್ರತಿಯೊಬ್ಬರ ಆದ್ಯ ಕರ್ತವ್ಯ. ಜೊತೆಗೆ ಸಂವಿಧಾನವು ಪ್ರಸ್ತಾವನೆಯಲ್ಲಿ ತಿಳಿಸಿದಂತೆ ಪ್ರತಿಯೊಬ್ಬರಿಗೂ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ, ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಮನೋಭಾವನೆ, ಬೆಳೆಸಿಕೊಂಡು ವಿಚಾರ, ಅಭಿವ್ಯಕ್ತಿ ಸ್ವಾತಂತ್ರದ ಜೊತೆಗೆ ಮಹಿಳೆಯರ ಸ್ಥಾನಮಾನಕ್ಕೆ ಧಕ್ಕೆ ಉಂಟಾಗದ ರೀತಿಯಲ್ಲಿ ಸಂವಿಧಾನದ ಆಶಯಗಳನ್ನು ಗೌರವಿಸಿ ಬದುಕುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.

ಭಾರತದ ಪ್ರತಿಯೊಬ್ಬ ಪ್ರಜೆಗಳು ತಮ್ಮದೇ ರೀತಿಯ ಹಕ್ಕು ಮತ್ತು ಕರ್ತವ್ಯಗಳನ್ನ ಬಳಸಿಕೊಂಡು ಸಂವಿಧಾನದ ಚೌಕಟ್ಟಿನೊಳಗೆ ಕಾನೂನು ರೀತಿಯಲ್ಲಿ ಸಹಕಾರ, ಸಹಬಾಳ್ವೆ ತತ್ವದ ಅಡಿಯಲ್ಲಿ ಜೀವನ ರೂಪಿಸಿಕೊಳ್ಳಬೇಕೆಂದು ತಿಳಿಸಿದರು . ಜೊತೆಗೆ ಶಿಬಿರಾರ್ಥಿಗಳು ಇತ್ತೀಚಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಕಡೆ ಹೆಚ್ಚು ಒಲವು ಕೊಟ್ಟು ಸರಕಾರಿ ಹುದ್ದೆಯನ್ನು ಪಡೆಯುವ ನಿಟ್ಟಿನಲ್ಲಿ ಸತತ ಪರಿಶ್ರಮ ,ನಿರಂತರ ಅಭ್ಯಾಸದ ಕಡೆ ಗಮನ ಹರಿಸಬೇಕೆಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದ ಚಂದ್ರಶೇಖರ್ ಹೆಳವರ ರವರು ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು ಸಮಯಪ್ರಜ್ಞೆ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕೆಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕಾಲೇಜಿನ ಪ್ರಾಚಾರ್ಯರಾದ ಶಂಕ್ರಪ್ಪ ಅಂಗಡಿ, ಉಪನ್ಯಾಸಕರಾದ ಕುಮಾರಿ ಆಫ್ರಿನ್ ಬೇಗಂ ಶ್ರೀಮತಿ ಶೈಲಜಾ ,ಶರಣಬಸವ ಕರಡಿ ಗುಡ್ಡ ಹಾಗೂ ಸಹ ಶಿಕ್ಷಕರಾದ ಗೋಪಾಲ್ ನಾಯಕ್ ಜೂಕೂರು ಅತಿಥಿ ಶಿಕ್ಷಕರಾದ ಶ್ರೀಮತಿ ಸುಮಲತಾ, ಶ್ರೀಮತಿ ಇನಾಕ್ಷಿ ಹಾಗೂ ಕಾರ್ಯಕ್ರಮದ ನಿರೂಪಣೆಯನ್ನು ಶಿಬಿರಾರ್ಥಿ ಈಶ್ವರಮ್ಮ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಸಿಬ್ಬಂದಿಗಳು ಮತ್ತು ಎನ್.ಎಸ್.ಎಸ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಹರವಿ ಗ್ರಾಮದ ಪಿಎಂಶ್ರೀ ಶಾಲೆಯಲ್ಲಿ ವಿಶೇಷ ಉಪನ್ಯಾಸ

# ಸುದೀರ್ಘ ಇತಿಹಾಸ ಭವ್ಯ ಪರಂಪರೆ ಹೊಂದಿದ ಭಾಷೆ ಕನ್ನಡ – ರಮೇಶಬಾಬು ಯಾಳಗಿ



ಧೈರ್ಯದ ದಾರಿ

**ಮಾನ್ವಿ–** ಭಾರತೀಯ ಭಾಷೆಗಳಲ್ಲಿಯೇ ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿಗಳನ್ನು ತನ್ನ ಮುಡಿಗೇರಿಸಿಕೊಂಡಿರುವ ಕನ್ನಡ ಭಾಷೆಗೆ ಸುದೀರ್ಘ ಚರಿತ್ರೆ ಮತ್ತು ಭವ್ಯ ಪರಂಪರೆಯಿದೆ ಎಂದು ಸಾಹಿತಿ ರಮೇಶಬಾಬು ಯಾಳಗಿ ಹೇಳಿದರು.

ಅವರು ಸಿರವಾರ ತಾಲೂಕಿನ ಹರವಿ ಗ್ರಾಮದ ಪಿ.ಎಂ.ಶ್ರೀ ಮಾದರಿ ಶಾಲೆಯಲ್ಲಿ "ಕನ್ನಡ ಸಾಹಿತ್ಯದ ಸಿರಿವಂತಿಕೆ" ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ನೀಡಿದರು.

ಸಿರಿವಂತಿಕೆಯ, ಹಿರಿಮೆಯ ಈ ಕನ್ನಡ ಭಾಷೆಯ ಸಾಹಿತ್ಯವನ್ನು ವಿದ್ಯಾರ್ಥಿಗಳು ಅಧ್ಯಯನ ಮಾಡಿ ಶಿಕ್ಷಣದೊಂದಿಗೆ ಸಂಸ್ಕಾರ ಬೆಳೆಸಿಕೊಳ್ಳಬೇಕು. ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳಲು ಕನ್ನಡ ಸಾಹಿತ್ಯದ ಓದು ಅಗತ್ಯ ಎಂದರು.

ಕನ್ನಡ ಭಾಷೆಯ ಸಾಹಿತ್ಯದ ಅಪೂರ್ವ ಪರಂಪರೆಯನ್ನು ಉಳಿಸಿ ಬೆಳೆಸುವ ಹೊಣೆಗಾರಿಕೆ ಭಾವಿ ನಾಗರಿಕರಾದ ವಿದ್ಯಾರ್ಥಿಗಳ ಮೇಲಿದೆ. ಈ ಮಹತ್ಕಾರ್ಯದಲ್ಲಿ ಸರ್ವರೂ ಪಾಲ್ಗೊಳ್ಳಬೇಕು. ನಾಡು ನುಡಿಯ ಅಭಿವೃದ್ಧಿ ವಿಚಾರದಲ್ಲಿ ಸರಕಾರದೊಂದಿಗೆ ನಾಡಿನ ಜನತೆ ಸಕ್ರಿಯವಾಗಿ ಕೈ ಜೋಡಿಸೋಣ ಎಂದ ಯಾಳಗಿ ಅವರು ಅತ್ಯಂತ ಉತ್ತಮವಾದ ವಿಷಯದ ಮೇಲೆ ಉಪನ್ಯಾಸ ಆಯೋಜಿಸಿ ಮಕ್ಕಳಿಗೆ ಕನ್ನಡ ಭಾಷೆ ಸಾಹಿತ್ಯದ ಪರಿಚಯ ಮಾಡಿಸುತ್ತಿರುವ

ಪಿ.ಎಂ. ಶ್ರೀ ಶಾಲೆಯ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು.

ಪ್ರೌಢಶಾಲಾ ವಿಭಾಗ ಮುಖ್ಯೋಪಾಧ್ಯಾಯ ರಾಜಾಖಾನ್ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದರು ಪ್ರಾಥಮಿಕ ವಿಭಾಗದ ಮುಖ್ಯೋಪಾಧ್ಯಾಯ ಶಿವಕುಮಾರ್ ಕಾರ್ಯಕ್ರಮ ಉದ್ಘಾಟಿಸಿದರು.

ಎಸ್ ಡಿ ಎಂ ಸಿ ಅಧ್ಯಕ್ಷ ಬಸವರಾಜ, ಉಪಾಧ್ಯಕ್ಷ ವೀರೇಶ್ ಮತ್ತು ಸದಸ್ಯರಾದ ಹನಮಂತಪ್ಪ,

ಅಯ್ಯಪ್ಪ ಮುಂತಾದವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಶಿಕ್ಷಕ ವೀರೇಶ್ ಸ್ವಾಗತಿಸಿದರು.ಶಿಕ್ಷಕ ಮಲ್ಲೇಶಪ್ಪ ಹರವಿ ನಿರೂಪಿಸಿ ವಂದಿಸಿದರು.

ಇದೇ ಸಂದರ್ಭದಲ್ಲಿ ಎನ್.ಎನ್.ಎಮ್. ಎಸ್,ಪರೀಕ್ಷಾ ಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಸಾಂಕೇತಿಕವಾಗಿ ವಿತರಿಸಲಾಯಿತು.

# ಪಿಯು ಪರೀಕ್ಷೆ: ಇತಿಹಾಸ ವಿಷಯಕ್ಕೆ 1111 ವಿದ್ಯಾರ್ಥಿಗಳು ಗೈರು

**ರಾಯಚೂರು ಮಾ,5–** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2026ರ ಮಾರ್ಚ್ 05ರ ಗುರುವಾರ ದಂದು ನಡೆದ ಇತಿಹಾಸ ವಿಷಯದಲ್ಲಿ 1,111 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ.

ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ಇತಿಹಾಸ ವಿಷಯದಲ್ಲಿ ಪರೀಕ್ಷೆಗೆ 12,092 ನೋಂದಣಿಯಾಗಿದ್ದು, 10,981 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 1,111 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೊಕ್ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೊದಲನೇ ಪುಟದಿಂದ

# ಸಿಎಂ ಕುರ್ಚಿ ಕಿತ್ತಾಟದ ನಡುವೆಯೂ ಇಂದು ದಾಖಲೆಯ ಬಜೆಟ್ ಮಂಡಿಸಲಿರುವ ಸಿದ್ದರಾಮಯ್ಯ

ಅನುಷ್ಠಾನಕ್ಕೆ ತರುವ ಸಂಬಂಧಪಟ್ಟಂತೆಯೂ ಬಜೆಟ್ ತಯಾರಿಕೆಯ ವೇಳೆಯಲ್ಲಿ ಚರ್ಚೆಗಳಾಗಿದ್ದವು.
ಕೃಷಿ ಇಲಾಖೆಯಲ್ಲಿ ರೈತ ಕಲ್ಯಾಣಕ್ಕೆ ಸಂಬಂಧಪಟ್ಟಂತೆ ಹಲವಾರು ಯೋಜನೆಗಳು ಚರ್ಚೆಯಾಗಿವೆ. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಬಿಎ ಸೇರಿದಂತೆ ಗ್ರಾಮೀಣ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಇದೇ ವರ್ಷ ನಡೆಯುವುದರಿಂದಾಗಿ ಮತದಾರರ ಓಲೈಕೆಗಾಗಿ ಒಂದಿಷ್ಟು ಜನಪ್ರಿಯ ಯೋಜನೆಗಳನ್ನು ಘೋಷಿಸಲು ಸಿದ್ದರಾಮಯ್ಯ ತಯಾರಿ ನಡೆಸಿದ್ದಾರೆ.
ಕಾಂಗ್ರೆಸ್ ಚುನಾವಣೆ ವೇಳೆಯಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವುದಾಗಿ ಭರವಸೆ ನೀಡಿತ್ತು. ಈ ನಿಟ್ಟಿನಲ್ಲಿ ಸಾಕಷ್ಟು ಒತ್ತಡಗಳು ಕೇಳಿ ಬರುತ್ತಿವೆ. ಆದರೆ ಸದ್ಯದ ಆರ್ಥಿಕ ಪರಿಸ್ಥಿತಿಯಲ್ಲಿ ಅದು ಕಷ್ಟಸಾಧ್ಯ ಎನ್ನಲಾಗುತ್ತಿದೆ.

ಹೀಗಾಗಿ ಸರ್ಕಾರಿ ನೌಕರರನ್ನು ಮನವೊಲಿಸಲು ಬೇರೆ ರೀತಿಯ ಹೊಸ ಕಾರ್ಯಕ್ರಮಗಳನ್ನು ನೀಡುವ ಬಗ್ಗೆ ಸಿದ್ದರಾಮಯ್ಯ ಸಮಾಲೋಚನೆ ನಡೆಸಿರುವುದು ತಿಳಿದು ಬಂದಿತ್ತು. ಒಂದೆಡೆ ಆರ್ಥಿಕ ಸವಾಲುಗಳು ಮತ್ತೊಂದೆಡೆ ಸಿದ್ದರಾಮಯ್ಯ ಅವರ ತಮ ಹಿರಿತನ ಹಾಗೂ ಅನುಭವಕ್ಕನುಗುಣವಾಗಿ ಪರಿಣಾಮಕಾರಿ ಬಜೆಟ್ ಮಂಡಿಸುವ ಅನಿವಾರ್ಯತೆಗೆ ಸಿಲುಕಿದ್ದಾರೆ.

ಮೊದಲೆಲ್ಲಾ ಯೋಜನಾ ವೆಚ್ಚಕ್ಕೆ ಹೆಚ್ಚು ಒತ್ತು ನೀಡಿ ಆಸ್ತಿ ಸೃಜನೆ ಹಾಗೂ ಆದಾಯ ವೃದ್ಧಿಗೆ ಹೆಚ್ಚು ಒತ್ತು ನೀಡುತ್ತಿದ್ದರು. ಆದರೆ ಗ್ಯಾರಂಟಿ ಯೋಜನೆಗಳಿಂದಾಗಿ ಅಭಿವೃದ್ಧಿ ಕಾರ್ಯಗಳಿಗೆ ಅನುದಾನದ ಕೊರತೆಯನ್ನು ಆರ್ಥಿಕ ಇಲಾಖೆ ಎದುರಿಸುತ್ತಿದೆ.

ಗ್ಯಾರಂಟಿ ಯೋಜನೆಗಳಲ್ಲಿ ಮಹಿಳೆಯರ ಉಚಿತ ಪ್ರಯಾಣದ ಶಕ್ತಿ ಯೋಜನೆಯ ವೆಚ್ಚ ನಿರೀಕ್ಷೆ ಮೀರಿ ಹೆಚ್ಚಾಗುತ್ತಿದೆ. ಹೊಸ ಪಡಿತರ ಚೀಟಿಗಳಿಗೆ ಅವಕಾಶ ನೀಡದೇ ಇರುವುದರಿಂದಾಗಿ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಸಂಖ್ಯೆ ಸದ್ಯಕ್ಕೆ ತಟಸ್ಥವಾಗಿದೆ. ಒಂದು ವೇಳೆ ಹೊಸ ಪಡಿತರ ಚೀಟಿಗಳನ್ನು ನೀಡಿದರೆ, ಫಲಾನುಭವಿಗಳ ಸಂಖ್ಯೆ ದುಪ್ಪಟ್ಟಾಗುವ ಸಾಧ್ಯತೆ ಇದೆ. ಹೀಗಾಗಿ ಹೊಸ ಪಡಿತರ ಚೀಟಿಗಳನ್ನು ವಿತರಿಸಬಾರದು ಎಂದು ಆಹಾರ ಇಲಾಖೆಯ ಮೇಲೆ ಭಾರಿ ಒತ್ತಡ ಹೇರಲಾಗುತ್ತಿದೆ. ಕಳೆದ ನಾಲ್ಕು ವರ್ಷಗಳಿಂದಲೂ ಬೇರೆ-ಬೇರೆ ಕಾರ್ಯಗಳಿಗಾಗಿ ಹೊಸ ಪಡಿತರ ಚೀಟಿಗಳಿಗಾಗಿ ನಿರೀಕ್ಷಿಸುತ್ತಿರುವವರ ಆಕ್ರೋಶ ತೀವ್ರವಾಗಿದೆ. ಈ ಬಜೆಟ್‌ನಲ್ಲಿ ಇದಕ್ಕೊಂದು ಪರಿಹಾರ ನೀಡಬೇಕೆಂದು ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ ಕೆ.ಎಚ್.ಮುನಿಯಪ್ಪ ಹಲವು ಬಾರಿ ಒತ್ತಡ ಹೇರಿದರು.

ಕೈಗಾರಿಕೆ ಹಾಗೂ ವಾಣಿಜ್ಯೋದ್ಯಮ ಸಂಸ್ಥೆಗಳು ನಾನಾ ರೀತಿಯ ರಿಯಾಯಿತಿಗಳಿಗಾಗಿ ಪ್ರಸ್ತಾವನೆ ಸಲ್ಲಿಸಿವೆ. ಅವುಗಳನ್ನು ಪರಿಗಣಿಸುವುದು ಅಭಿವೃದ್ಧಿ ದೃಷ್ಟಿಯಿಂದ ಅತ್ಯಗತ್ಯ ಎಂಬ ಸಲಹೆ ಆರ್ಥಿಕ ಇಲಾಖೆಯಿಂದ ಕೇಳಿ ಬಂದಿದೆ.

ಈಗಾಗಲೇ ರಾಜ್ಯದ ಸಾಲ ಹನುಮಂತನ ಬಾಲದಂತೆ ದೊಡ್ಡದಾಗಿ ಬೆಳೆದಿದೆ. ಒಂದೆಡೆ ಆರ್ಥಿಕ ಅಭಿವೃದ್ಧಿ ಹಾಗೂ ಮತ್ತೊಂದೆಡೆ ಗ್ಯಾರಂಟಿಗಳ ನಡುವೆ ಸಮತೋಲಿತ ಬಜೆಟ್ ಮಂಡಿಸಲು ಸಿದ್ದರಾಮಯ್ಯ ಕಸರತ್ತು ನಡೆಸಿದ್ದಾರೆ. ಮದ್ಯ, ಮೋಟಾರು ತೆರಿಗೆ ಸೇರಿದಂತೆ ವಿವಿಧ ಬಾಬ್ತುಗಳ ಮೇಲೆ ತೆರಿಗೆಯ ಹೊರೆಯನ್ನು ನಿರೀಕ್ಷಿಸಲಾಗಿದೆ.

# ವಿದ್ಯಾರ್ಥಿಗಳಿಗೆ ಎನ್.ಎಸ್.ಎಸ್ ನಿಂದ ಸೇವಾ ಮನೋಭಾವ ಬೆಳೆಯುತ್ತದೆ. ನರಸಿಂಹ ನಾಯಕ ಕರಡಿಗುಡ್ಡ



ಧೈರ್ಯದ ದಾರಿ

**ಮಾನ್ವಿ :** ಗ್ರಾಮೀಣ ಭಾಗದಲ್ಲಿ ಅನಕ್ಷರಸ್ತರನ್ನ ಪತ್ತೆ ಹಚ್ಚುವುದು ಮೂಡ ನಂಬಿಕೆ ಬಗ್ಗೆ ಅರಿವು ಮೂಡಿಸುವುದು ಸರಕಾರದಿಂದ ದೊರಯುವ ಯೋಜನೆಗಳು ಜನರಿಗೆ ಎಷ್ಟರ ಮಟ್ಟಿಗೆ ತಲುಪಿವೆ ಎಂದು ಶಿಬಿರಾರ್ಥಿಗಳು ತಿಳಿಸುವ ಪ್ರಯತ್ನವನ್ನು ಮಾಡಬೇಕೆಂದು ಕಾರ್ಯಕ್ರಮ ಉದ್ಘಾಟಿಸಿ ನರಸಿಂಹ ನಾಯಕ ಕರಡಿಗುಡ್ಡ ಉದ್ಘಾಟಕರ ನುಡಿಯನ್ನು ನುಡಿದರು.

ಮಾನ್ವಿ ತಾಲೂಕಿನ ಕರಡಿಗುಡ್ಡ ಗ್ರಾಮದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಹಾಗೂ ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯ ಮಾನ್ವಿ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಯೋಜನೆ ವಿಶೇಷ ಶಿಬಿರದ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ರಾಷ್ಟ್ರೀಯ ಸೇವಾ ಯೋಜನೇಯ ಪ್ರಸ್ತಾವಿಕ ನುಡಿಯನ್ನು ಆಂಜನೇಯ ನಸಲಾಪುರ ಮಾಡಿದರು. ಕಾರ್ಯಕ್ರಮದ ಮುಖ್ಯ ಅಥಿತಿಯಾದ ಚಂದ್ರಶೇಖರ ಎಚ್ ಮಾತನಾಡಿ ವಿದ್ಯಾರ್ಥಿಗಳು ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಭಾಗವಹಿಸಿ ವ್ಯಕ್ತಿತ್ವ ವಿಕಾಸನ ಬೆಳೆಸುವುದರ ಜೊತೆಗೆ ದೇಶ ಸೇವೆ, ಸೇವಾ ಮನೋಭಾವ ನಾಯಕತ್ವ ಗುಣಗಳನ್ನು ಬೆಳಸಿಕೊಳ್ಳಬೇಕೆಂದು ಹೇಳಿದರು. ಶರಣಬಸವ ಕರಡಿಗುಡ್ಡ ಉಪನ್ಯಾಸಕರು ರಾಷ್ಟ್ರೀಯ ಸೇವಾ ಯೋಜನೆಯ ಪ್ರತಿಜ್ಞಾ ವಿಧಿ ಭೋದಿಸಿದರು.

ಈ ಕಾರ್ಯಕ್ರಮದಲ್ಲಿ ಊರಿನ ಮುಂಖಂಡರಾದ ಶ್ರೀಧರ್ ನಾಯಕ ಕರಡಿಗುಡ್ಡ, ಪಂಪಣ್ಣ ಗೌಡ, ಎಸ್.ಡಿ.ಎಮ್.ಸಿ ಉಪಾಧ್ಯಕ್ಷರಾದ ಸುರೇಶ ಮಡಿವಾಳ, ಟಿ. ಹನುಮೇಶ ನಾಯಕ, ಭಾಷಾ, ಡಾ.ವೆಂಕಟೇಶ ಓಲೇಕಾರ, ಹನುಮೇಶ ಕೊರವಂಜಿ ರಾಜಲಬಂಡ ಹಾಗೂ ಊರಿನ ನಾಗರಿಕರು ಉಪಸ್ಥಿತರಿದ್ದರು. ಪ್ರಾರ್ಥನೆ ಗೀತೆಯನ್ನು ಸ್ನೇಹ ಸಂಗಡಿಗರು ಹಾಡಿದರು. ಅಂಬಣ್ಣ ನಾಯಕ ಉಪನ್ಯಾಸಕರು ನಿರೂಪಿಸಿದರು, ಶರಣಬಸವ ಉಪನ್ಯಾಸಕರು ಸ್ವಾಗತಿಸಿದರು, ಶೈಲಜಾ ಉಪನ್ಯಾಸಕಿ ವಂದಿಸಿದರು.

# ಮಾ.7 ರಂದು ತುಂಗಭದ್ರ ನೀರಾವರಿ ಕಾರ್ಮಿಕರ ಬೃಹತ್ ಹಕ್ಕೊತ್ತಾಯ ಸಮಾವೇಶ: ರಾಜಾಸಾಬ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪತ್ರಿಕಾ ಭವನದಲ್ಲಿ ತುಂಗಭದ್ರ ನೀರಾವರಿ ಕಾರ್ಮಿಕರ ಸಂಘದ ತಾಲೂಕು ಅಧ್ಯಕ್ಷರಾದ ರಾಜಾಸಾಬ ಮಾತನಾಡಿ ಮಾ.7 ರಂದು ಬೆಳಿಗ್ಗೆ 10-30ಕ್ಕೆ ರಾಯಚೂರು ನಗರದಲ್ಲಿನ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ತುಂಗಭದ್ರ ನೀರಾವರಿ ಕಾರ್ಮಿಕರ ಕೇಂದ್ರ ಸಮಿತಿ ಎ.ಐ.ಸಿ.ಸಿ.ಟಿ.ಯು ಸಂಯೋಜಿತ ವತಿಯಿಂದ ಬೃಹತ್ ಹಕ್ಕೊತ್ತಾಯ ಸಮಾವೇಶ ಮತ್ತು ಸರ್ವ ಸದಸ್ಯರ ಸಮಾನ್ಯಸಭೆ-2026 ಅನ್ನು ಮಾಜಿ ಕಾರ್ಮಿಕ ಸಚಿವರು ಹಾಗೂ ಹಿರಿಯ ಕಾರ್ಮಿಕ ನಾಯಕರಾದ ಎಸ್.ಕೆ. ಕಾಂತ ಅವರು ಉದ್ಘಾಟಿಸಲಿದ್ದಾರೆ. ಜೊತೆಗೆ ಎಐಸಿಸಿ ಟಿಯು ರಾಷ್ಟ್ರೀಯ ಉಪಾಧ್ಯಕ್ಷರು ಹೈಕೋರ್ಟ್ ವಕೀಲೆ. ಕ್ಲಿಫ್ಟನ್ ಡಿ.ರಿಜೋರಿಯಾ ಹಾಗೂ ಎಐಸಿಸಿಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಮೈತ್ರೇಯಿ ಕೃಷ್ಣನ್ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಸಮಾವೇಶದಲ್ಲಿ ಪ್ರಮುಖವಾಗಿ ತುಂಗಭದ್ರಾ ನೀರಾವರಿ ಅಚ್ಚುಕಟ್ಟು ಪ್ರದೇಶದಲ್ಲಿ ಗುತ್ತಿಗೆ ಪದ್ಧತಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಕಾರ್ಮಿಕರನ್ನು ಖಾಯಂಗೊಳಿಸಬೇಕು ಹಾಗೂ ಬದುಕುವ ವೇತನ, ಇ.ಪಿ.ಎಫ್. ಮತ್ತು ಇಎಸ್.ಐ. ಬಾಕಿ ವೇತನ ಕೂಡಲೇ ಪಾವತಿಸಿ . ಪ್ರತಿ ತಿಂಗಳು ನಿಗದಿತ ಸಮಯಕ್ಕೆ ಪಾವತಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕೆಲಸದ ಪರಿಕರ, ಗುರುತಿನ ಚೀಟಿ, ಸಮವಸ್ತ್ರ ಸೇರಿದಂತೆ ಅಗತ್ಯ ಮೂಲಸೌಲಭ್ಯ ಕಲ್ಪಿಸಬೇಕು ಎಂದು ತುಂಗಭದ್ರಾ ನೀರಾವರಿ ಕಾಲುವೆ ನಂ-4 ಸಿರಿವಾರ ವಿಭಾಗದ ಮಾನ್ವಿ, ಸಿರವಾರ, ಹಿರೇಕೊಟ್ನೆಕಲ್ ಹಾಗೂ ಕವಿ ತಾಳ ಉಪ ವಿಭಾಗದ ಎಲ್ಲಾ ಕಾರ್ಮಿಕರು ಈ ಹಕ್ಕೊತ್ತಾಯ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ ಎ.ಐ.ಸಿ.ಸಿ.ಟಿ.ಯು ಸಂಯೋಜಿತ ಮಾನ್ವಿ ಉಪ ವಿಭಾಗದ ಅಧ್ಯಕ್ಷರಾದ ಬಸಲಿಂಗಪ್ಪ ಜಂಬಲದಿನ್ನಿ, ಹಿರೆಕೊಟ್ನೆಕಲ್ ಉಪ ವಿಭಾಗದ ಅಧ್ಯಕ್ಷ ವೆಂಕಟೇಶ್ ಕೋರಿ, ಸಿರಿವಾರ ಉಪ ವಿಭಾಗದ ಅಧ್ಯಕ್ಷ ಈಶಪ್ಪ ಗೌಡ, ಕವಿತಾಳ ಉಪ ವಿಭಾಗದ ಅಧ್ಯಕ್ಷ ಚಂದು ಸಾಬ್ ಸೇರಿದಂತೆ ಉಡುಪಿ ಕೃಷ್ಣ, ಚಂದ್ರಶೇಖ ರಯ್ಯ, ಈಶಪ್ಪಗೌಡ, ಪರಶುರಾಮ್ .ತಿರುಪತಿ ಸೇರಿದಂತೆ ಮಾನ್ವಿ ನೀರಾವರಿ ಕಾರ್ಮಿಕರು ಇದ್ದರು.

# ಜನಗಣತಿ 2027: ಮೂರು ದಿನಗಳ ತರಬೇತಿ ಕಾರ್ಯಗಾರಕ್ಕೆ ಚಾಲನೆ



ಧೈರ್ಯದ ದಾರಿ

**ರಾಯಚೂರು:** ಜನಗಣತಿ-2027 ಹಿನ್ನೆಲೆಯಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು, ಚಾರ್ಜ್ ಅಧಿಕಾರಿ ಗಳು ಹಾಗೂ ಇತರೆ ಸಿಬ್ಬಂದಿಗೆ 3 ದಿನಗಳ ತರಬೇತಿ ಕಾರ್ಯಾಗಾರವು ಮಾರ್ಚ 4ರಂದು ಆರಂಭವಾಯಿತು.

ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣ ದಲ್ಲಿ ನಡೆದ ಕಾರ್ಯಗಾರಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ್ ಕಾಂದೂ ಅವರು ಚಾಲನೆ ನೀಡಿ ಮಾತನಾಡಿ, ಈ ಜನಗಣತಿಯು ಡಿಜಿಟಲ್ ಮೋಡನಲ್ಲಿ ನಡೆಯಲಿದೆ. ಇಲ್ಲಿ ಬರುವ ಪ್ರಶ್ನಾವಳಿಗಳನ್ನು ಸರಿಯಾಗಿ ಓದಿ ತಿಳಿದುಕೊಳ್ಳಬೇಕು. ಯಾವುದೇ ಗೊಂದಲಗಳಿದ್ದಲ್ಲಿ ಪರಿಹರಿಸಿಕೊಳ್ಳಬೇಕು. ಈ ಜನಗಣತಿ ಕಾರ್ಯವು ಸಂವಿಧಾನ ಬದ್ಧವಾದ ಕರ್ತವ್ಯ ಎಂದು ಭಾವಿಸಿ, ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಮಾರ್ಗಸೂಚಿಯನುಸಾರ ಜನಗಣತಿ ಪ್ರಕ್ರಿಯೆಯಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ ಅವರು ಮಾತನಾಡಿ, ಕರ್ನಾಟಕದಲ್ಲಿ ಜನಗಣತಿಯು ಒಟ್ಟು ಎರಡು ಹಂತಗಳಲ್ಲಿ ನಡೆಯಲಿದೆ. ಜನಗಣತಿ ನಿರ್ದೇಶನಾಲಯವು ನೀಡುವ ಯಾವುದೇ ಬಗೆಯ ಮಾರ್ಗಸೂಚಿಗಳನ್ನು ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಅರ್ಥೈಸಿ ಕೊಂಡು ಜನಗಣತಿ ಪ್ರಕ್ರಿಯೆಯಲ್ಲಿ ಶ್ರದ್ಧೆಯಿಂದ ಭಾಗಿಯಾಗಬೇಕು ಎಂದು ತಿಳಿಸಿದರು.

ಜನಗಣತಿಯ ಹಿನ್ನೆಲೆ, ಜನಗಣತಿಯ ಪ್ರಕ್ರಿಯೆ, ಜನಗಣತಿಯ ವಿಧಾನಗಳು, ಜನಗಣತಿಯಲ್ಲಿ ಭಾಗಿಯಾಗುವ ಅಧಿಕಾರಿಗಳು ಮತ್ತು ಸಿಬ್ಬಂದಿ ಕರ್ತವ್ಯಗಳ ಬಗ್ಗೆ ತರಬೇತಿಯಲ್ಲಿ ಸಮಗ್ರ ವಿವರಿಸ`ಲಾಯಿತು.


ತರಬೇತಿ ಕಾರ್ಯಗಾರದ ಉದ್ಘಾಟನಾ ಸಮಾರಂಭ ದಲ್ಲಿ ಲಿಂಗಸೂರ ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಡಾ.ಟಿ.ರೋಣಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ. ಬಡಿಗೇರ, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಯ ಸಹಾಯಕ ನಿರ್ದೇಶಕರಾದ ಬಸವರಾಜ ನಾಗರಬೆಂಚಿ ಹಾಗೂ ಇತರರು ಉಪಸ್ಥಿತರಿದ್ದರು.

ಐಎಎಸ್ ಪ್ರೋಬೇಷನರಿ ಹಾಗೂ ತಹಸೀಲ್ದಾರ ರಾದ ಪುರುರಾಜ್ ಸಿಂಗ್ ಸೋಲಂಕಿ ಅವರು ಸ್ವಾಗತಿಸಿದರು. ಶಿರಸ್ತೇದಾರ ಸೂಗುರೇಶ ದೇಸಾಯಿ ನಿರೂಪಿಸಿದರು. ತರಬೇತಿಯಲ್ಲಿ ಸಿಂಧನೂರ, ಮಾನವಿ, ಮಸ್ಕಿ, ಲಿಂಗಸಗೂರು, ದೇವದುರ್ಗ ಹಾಗೂ ಅರಕೇರಾ ತಹಸೀಲ್ದಾರರು, ದೇವದುರ್ಗ, ಮುದಗಲ್, ಲಿಂಗಸೂರ, ಮಾನವಿ ಮತ್ತು ಮಸ್ಕಿ ಪುರಸಭೆಗಳ ಮತ್ತು ತುರವಿಹಾಳ, ಹಟ್ಟಿ, ಬಳಗಾನೂರ, ಸಿರವಾರ, ಕವಿತಾಳ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ವಿಷಯ ನಿರ್ವಾಹಕರು ಹಾಗೂ ತಾಂತ್ರಿಕ ಸಹಾಯಕರು ಭಾಗಿಯಾಗಿದ್ದರು.

# ಶಿಕ್ಷಣದ ಜೊತೆ ಸಾಂಸ್ಕೃತಿಕ ಚಟುವಟಿಕೆಗಳಿಗೆ ಮಹತ್ವ ನೀಡಿ: ಶಾಸಕ ಪ್ರಭು ಚವ್ಹಾಣ

**ಕಮಲನಗರ:ಮಾ.**5-ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ಶಿಕ್ಷಣದ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳೂ ಅತ್ಯಂತ ಅಗತ್ಯವೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ತಿಳಿಸಿದರು.ಕಮಲನಗರ ತಾಲ್ಲೂಕಿನ ಠಾಣಾ ಕುಶನೂರ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರಾಥಮಿಕ ವಿಭಾಗದ ವತಿಯಿಂದ ಮಾ.2ರಂದು ಶಾಲೆಯ ಆವರಣದಲ್ಲಿ ಏರ್ಪಡಿಸಿದ್ದ ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಾಠದೊಂದಿಗೆ ಕ್ರೀಡೆ, ಕಲೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸಮಾನ ಮಹತ್ವ ನೀಡಿದಾಗ ಮಾತ್ರ ಮಕ್ಕಳಲ್ಲಿ ಆತ್ಮವಿಶ್ವಾಸ ಮತ್ತು ಪ್ರತಿಭೆ ಬೆಳೆಸಬಹುದು. ಈ ದಿಶೆಯಲ್ಲಿ ಶಿಕ್ಷಕರು ಮತ್ತು ಪಾಲಕರು ಮಹತ್ವ ಕೊಡಬೇಕು ಎಂದರು.ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದು, ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕೆಲಸವನ್ನು ನಿರಂತರವಾಗಿ ಮಾಡುತ್ತಾ ಬರುತ್ತಿದ್ದೇನೆ. ಅಗತ್ಯತೆಗೆ ಅನುಗುಣವಾಗಿ ಶಾಲೆ-ಕಾಲೇಜು, ವಸತಿ ಶಾಲೆ, ವಸತಿ ನಿಲಯಗಳನ್ನು ನಿರ್ಮಿಸುತ್ತಿದ್ದೇನೆ. ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸುವಂತೆ ಪಾಲಕರಿಗೆ ಮನವಿ ಮಾಡಿದ ಅವರು, ಬಹುತೇಕ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕುಸಿಯುತ್ತಿರುವ ಸಂದರ್ಭದಲ್ಲಿ ಠಾಣಾ ಕುಶನೂರ ಕೆಪಿಎಸ್ ಶಾಲೆಯ ಪ್ರಾಥಮಿಕ ವಿಭಾಗದಲ್ಲೇ ಸುಮಾರು 500 ವಿದ್ಯಾರ್ಥಿಗಳಿರುವುದು ಸಂತೋಷಕರ ವಿಷಯವೆಂದು ಅಭಿಪ್ರಾಯಪಟ್ಟರು.ಇಂದಿನ ದಿನಗಳಲ್ಲಿ ಮೊಬೈಲ್ ಗೀಳು ವಿದ್ಯಾರ್ಥಿಗಳ ಭವಿಷ್ಯಕ್ಕೆ ಹಾನಿಕಾರಕವಾಗುತ್ತಿದೆ. ಪಾಲಕರು ಈ ಕುರಿತು ಜಾಗೃತಿ ವಹಿಸಿ, ಮಕ್ಕಳು ಶಾಲೆಯಿಂದ ಮನೆಗೆ ಬಂದ ಬಳಿಕ ಅವರು ಏನು ಕಲಿತಿದ್ದಾರೆಂದು ವಿಚಾರಿಸುವ



ಅಭ್ಯಾಸ ಬೆಳೆಸಿಕೊಳ್ಳಬೇಕು. ಪ್ರತಿದಿನ ಕನಿಷ್ಠ ಒಂದು ಗಂಟೆಯಾದರೂ ಮಕ್ಕಳಿಗೆ ಸಮಯ ನೀಡಿದರೆ ಅವರ ಭವಿಷ್ಯ ಉಜ್ವಲವಾಗುತ್ತದೆ ಎಂದು ಶಾಸಕರು ಕಿವಿಮಾತು ಹೇಳಿದರು.ದಯಾನಂದ ಗಡ್ಡೆ ಪ್ರಾಸ್ತಾವಿಕ ಮಾತನಾಡಿದರು. ಠಾಣಾಕುಶನೂರ ವಿರಕ್ತ ಮಠದ ಪೂಜ್ಯ ಸಿದ್ದಲಿಂಗ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಪ್ರಾಚಾರ್ಯರಾದ ವಿಜಯಕುಮಾರ ಅಧ್ಯಕ್ಷತೆ ವಹಿಸಿದ್ದರು. ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಗಿರೀಶ ವಡೆಯರ್, ಕಾಶಿನಾಥ ಜೀರ್ಗೆ, ಶಿವಾಜಿರಾವ ಪಾಟೀಲ ಮುಂಗನಾಳ, ಸತೀಷ ಜೀರ್ಗೆ, ಓಂಕಾರ ಸ್ವಾಮಿ, ಸಚಿನ ರಾಠೋಡ, ಸಿಆರ್ಸಿ ನೌನಾಥ ಸೇರಿದಂತೆ ಇತರರು ಉಪಸ್ಥಿತರಿದ್ದರು. ಸುನೀಲ್ ರಂಡ್ಯಾಳೆ ಸ್ವಾಗತಿಸಿದರು. ವಾಮನರಾವ ಕಾಮತೆಕರ್ ವಂದಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರತಿಭೆ ತೋರಿದ ವಿದ್ಯಾರ್ಥಿಗಳಿಗೆ ಶಾಸಕರು ನಗದು ಬಹುಮಾನ ನೀಡಿ ಪ್ರೋತ್ಸಾಹಿಸಿದರು. ಕೆಪಿಎಸ್ ಶಾಲೆಗೆ ಹೆಚ್ಚಿನ ಅನುದಾನ ನೀಡಿ ಶಾಲೆಯನ್ನು ಮಾದರಿ ರೂಪದಲ್ಲಿ ಅಭಿವೃದ್ಧಿಪಡಿಸಿದ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಪಾಲಕರು ಶಾಸಕರಾದ ಪ್ರಭು ಬಿ.ಚವ್ಹಾಣ ಅವರನ್ನು ಸನ್ಮಾನಿಸಿದರು.

# ಮನೆಗೊಂದು ಗ್ರಂಥಾಲಯ ಹೊಸ ಆಂದೋಲನ: ಡಾ. ಮಾನಸ

**ವಿಜಯಪುರ, ಮಾ. 5**-ಮನೆಗೊಂದು ಗ್ರಂಥಾಲಯ ಅನುಷ್ಠಾನ ಇದೊಂದು ಹೊಸ ಅಂದೋಲನವಾಗಿದೆ. ರಾಜ್ಯದ ಪ್ರತಿ ಜಿಲ್ಲೆಯಲ್ಲಿಯೂ ಈ ಯೋಜನೆಗೆ ಒಳ್ಳೆಯ ಸ್ಪಂದನೆ ಸಿಗ್ತಾಯಿದೆ. ಮನೆಯಲ್ಲಿ ಟಿವಿ ಹಾಗೂ ದೇವರ ಕೋಣೆ ಇರುವಂತೆ, ಮನೆಗೊಂದು ಗ್ರಂಥಾಲಯ ನಿರ್ಮಾಣವಾದರೆ ಮಕ್ಕಳಲ್ಲಿ ಮತ್ತು ಯುವಕರಲ್ಲಿ ಓದುವ ಹವ್ಯಾಸ ಬೆಳೆಯುತ್ತದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಹೇಳಿದರು.

ಮಂಗಳವಾರ ನಗರದ ಸಾಯಿಪಾರ್ಕ್ ಬಡಾವಣೆಯ ಶ್ವೇತಾ ನಿಂಗನಗೌಡ ಪಾಟೀಲ ಅವರ ಮನೆಯಲ್ಲಿ ಮನೆಗೊಂದು ಗ್ರಂಥಾಲಯ ಅನುಷ್ಠಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸಮಿತಿಯ ಸದಸ್ಯ ಡಾ. ಕುಶಾಲ ಬರಗೂರು ಮಾತನಾಡಿ, ಮಕ್ಕಳ ಕೈಯಲ್ಲಿ ಮೊಬೈಲ್ ಕೊಡುವುದರ ಬದಲಾಗಿ ಪುಸ್ತಕವನ್ನು ಕೊಡಿ ಆ ಮಗು ಜಗತ್ತಿನ ಜ್ಞಾನಿಯಾಗುತ್ತಾನೆ ಎಂದು ಹೇಳುತ್ತಾ 'ಅಪ್ಪನೇ ದೇವರು' ಎಂಬ ಕೃತಿಯ ಪರಿಚಯವನ್ನು ಮಾಡಿದರು.

ಪ್ರಾಧಿಕಾರದ ಜಿಲ್ಲಾ ಸಮಿತಿಯ ಸದಸ್ಯ ಪ್ರೋ. ಅಡವಿಸ್ವಾಮಿ ಕೊಳಮಲಿ ಮಾತನಾಡಿ, ಪುಸ್ತಕದ ಓದು. ಮಸ್ತಕದ ಜ್ಞಾನವನ್ನು ವೃದ್ಧಿಸುತ್ತದೆ. ಇಂದಿನ ಯುವಕರ ಅಂತರಜಾಲದ ಬೆನ್ನು ಹತ್ತದೆ



ಪವಿತ್ರವಾದ ಪುಸ್ತಕವನ್ನು ಕೈಯಲ್ಲಿ ಹಿಡಿಯುವುದರ ಮೂಲಕ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಹೇಳಿದರು, ಅಧ್ಯಕ್ಷತೆ ವಹಿಸಿದ ಸಾಹಿತಿ ಶಂಕರ ಬೈಚಬಾಳ ಮಾತನಾಡಿ, ಪ್ರತಿಯೊಂದು ಮನೆಯಲ್ಲಿ ಮನೆಗೊಂದು ಗ್ರಂಥಾಲಯ ಅನುಷ್ಠಾನಗೊಳಬೇಕೆಂದು ಹೇಳಿದರು.

ಸುಜ್ಞಾನಿ ಪಾಟೀಲ ಸ್ವಾಗತಿಸಿದರು. ಬಸವರಾಜ ಸಾಲೋಡಗಿ ನಿರೂಪಿಸಿದರು. ಆರ್. ಕೆ. ಜೋಶಿ ವಂದಿಸಿದರು.

# ನಷ್ಟವಿಲ್ಲದೆ ಏನನ್ನು ಪಡೆಯಲು ಸಾಧ್ಯವಿಲ್ಲ

"ನಷ್ಟವಿಲ್ಲದೆ ಏನನ್ನು ಪಡೆಯಲು ಸಾಧ್ಯವಿಲ್ಲ" ಎಂಬುದು ಒಂದು ಪ್ರಸಿದ್ಧ ನಾಣ್ಣುಡಿ. ಇದರ ಅರ್ಥವೇನೆಂದರೆ, ಯಾವುದೇ ಒಂದು ವಿಷಯದಲ್ಲಿ ಲಾಭದಾಯಕವಾದ ಫಲಿತಾಂಶವನ್ನು ಪಡೆಯಲು, ನಾವು ಏನಾದರೂ ಒಂದು ರೀತಿಯಲ್ಲಿ ನಷ್ಟವನ್ನು ಅನುಭವಿಸಲೇಬೇಕು. ಇದು ಜೀವನದ ಒಂದು ಮೂಲಭೂತ ಸತ್ಯ.

**ಉದಾಹರಣೆಗಳು**

**1.ಶಿಕ್ಷಣ:** ಉತ್ತಮ ಶಿಕ್ಷಣ ಪಡೆಯಲು, ವಿದ್ಯಾರ್ಥಿಗಳು ತಮ್ಮ ಸಮಯ, ಶ್ರಮ, ಮತ್ತು ಹಣವನ್ನು ನಷ್ಟ ಮಾಡಬೇಕಾಗುತ್ತದೆ. ಅವರು ತಮ್ಮ ಬಿಡುವಿನ ಸಮಯವನ್ನು ಅಧ್ಯಯನ ಮಾಡಲು ವಿನಿಯೋಗಿಸಬೇಕು, ಮತ್ತು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ಕಷ್ಟಪಟ್ಟು ಕೆಲಸ ಮಾಡಬೇಕು.

**2.ವ್ಯವಹಾರ:** ಒಂದು ಯಶಸ್ವಿ ವ್ಯವಹಾರವನ್ನು ಸ್ಥಾಪಿಸಲು, ಉದ್ಯಮಿಗಳು ತಮ್ಮ ಹಣ, ಸಮಯ, ಮತ್ತು ಶ್ರಮವನ್ನು ನಷ್ಟ ಮಾಡಬೇಕಾಗುತ್ತದೆ. ಅವರು ಅಪಾಯಗಳನ್ನು ತೆಗೆದುಕೊಳ್ಳಬೇಕು, ಮತ್ತು ತಮ್ಮ ವ್ಯವಹಾರವನ್ನು ಬೆಳೆಸಲು ಕಷ್ಟಪಟ್ಟು ಕೆಲಸ ಮಾಡಬೇಕು.

**3.ಕ್ರೀಡೆ:** ಒಬ್ಬ ಕ್ರೀಡಾಪಟುವು ಒಂದು ಪಂದ್ಯಾವಳಿಯಲ್ಲಿ ಗೆಲ್ಲಲು, ಅವರು ತಮ್ಮ ಸಮಯ, ಶ್ರಮ, ಮತ್ತು ಶಕ್ತಿಯನ್ನು ನಷ್ಟ ಮಾಡಬೇಕಾಗುತ್ತದೆ. ಅವರು ತಮ್ಮ ದೇಹವನ್ನು ತರಬೇತಿ ಮಾಡಬೇಕು, ಮತ್ತು ಪಂದ್ಯಾವಳಿಯಲ್ಲಿ ಉತ್ತಮ ಪ್ರದರ್ಶನ ನೀಡಲು ಕಷ್ಟಪಟ್ಟು ಕೆಲಸ ಮಾಡಬೇಕು.

**4.ಸಂಬಂಧಗಳು:** ಒಬ್ಬ ವ್ಯಕ್ತಿಯು ಒಂದು ಉತ್ತಮ ಸಂಬಂಧವನ್ನು ಬೆಳೆಸಲು, ಅವರು ತಮ್ಮ ಸಮಯ, ಶ್ರಮ, ಮತ್ತು ಭಾವನೆಗಳನ್ನು ನಷ್ಟ ಮಾಡಬೇಕಾಗುತ್ತದೆ. ಅವರು ತಮ್ಮ ಸಂಗಾತಿಯೊಂದಿಗೆ ಸಂವಹನ ಮಾಡಬೇಕು, ಮತ್ತು ಅವರ ಅಗತ್ಯತೆಗಳನ್ನು ಪೂರೈಸಲು ಕಷ್ಟಪಟ್ಟು ಕೆಲಸ ಮಾಡಬೇಕು.

**ನಷ್ಟದ ಪ್ರಯೋಜನಗಳು**

ನಷ್ಟವು ನಮಗೆ ಹಲವು ಪ್ರಯೋಜನಗಳನ್ನು ನೀಡುತ್ತದೆ:

**1.ಅನುಭವ:** ನಷ್ಟವು ನಮಗೆ ಅನುಭವವನ್ನು ನೀಡುತ್ತದೆ, ಮತ್ತು ನಾವು ಅದರಿಂದ ಕಲಿಯಬಹುದು.

**2.ಬೆಳವಣಿಗೆ:** ನಷ್ಟವು ನಮ್ಮನ್ನು ಬೆಳೆಸುತ್ತದೆ, ಮತ್ತು ನಾವು ಅದರಿಂದ ಬಲಿಷ್ಠರಾಗಬಹುದು.

**3.ಸಹಾನುಭೂತಿ:** ನಷ್ಟವು ನಮಗೆ ಸಹಾನುಭೂತಿಯನ್ನು ಕಲಿಸುತ್ತದೆ, ಮತ್ತು ನಾವು ಇತರರೊಂದಿಗೆ ಹೆಚ್ಚು ಸಂವೇದನಾಶೀಲರಾಗಬಹುದು.

**4.ಸಹಿಷ್ಣುತೆ:** ನಷ್ಟವು ನಮಗೆ ಸಹಿಷ್ಣುತೆಯನ್ನು ಕಲಿಸುತ್ತದೆ, ಮತ್ತು ನಾವು ಅದರಿಂದ ಬಲಿಷ್ಠರಾಗಬಹುದು.

**ತೀರ್ಮಾನ:** "ನಷ್ಟವಿಲ್ಲದೆ ಏನನ್ನು ಪಡೆಯಲು ಸಾಧ್ಯವಿಲ್ಲ" ಎಂಬುದು ಒಂದು ಪ್ರಸಿದ್ಧ ನಾಣ್ಣುಡಿ. ನಾವು ಏನಾದರೂ ಒಂದು ವಿಷಯದಲ್ಲಿ ಲಾಯಕವಾದ ಫಲಿತಾಂಶವನ್ನು ಪಡೆಯಲು, ನಾವು ಏನಾದರೂ ಒಂದು ರೀತಿಯಲ್ಲಿ ನಷ್ಟವನ್ನು ಅನುಭವಿಸಲೇಬೇಕು. ನಷ್ಟವು ನಮಗೆ ಅನುಭವ, ಬೆಳವಣಿಗೆ, ಸಹಾನುಭೂತಿ, ಮತ್ತು ಸಹಿಷ್ಣುತೆಯನ್ನು ಕಲಿಸುತ್ತದೆ. ಆದ್ದರಿಂದ, ನಾವು ನಷ್ಟವನ್ನು ಒಪ್ಪಿಕೊಳ್ಳಬೇಕು, ಮತ್ತು ಅದರಿಂದ ಕಲಿಯಬೇಕು.



**–ಡಾ.ರವಿರಾಜು ಡಿ**
**ಸಹಾಯಕ ಪ್ರಾಧ್ಯಾಪಕರು**
**ರಾಯಚೂರು**

# ಕೆಎಎಸ್ ಮುಖ್ಯ ಪರೀಕ್ಷೆಯಲ್ಲಿ ಯಾವುದೇ ರೀತಿಯ ಅಕ್ರಮ ನಡೆದಿಲ್ಲ : ಕೆಪಿಎಸ್‌ಸಿ ಸ್ಪಷ್ಟನೆ

**ಬೆಂಗಳೂರು,ಮಾ.5–** ಕರ್ನಾಟಕ ಆಡಳಿತ ಸೇವೆ( ಕೆಎಎಸ್)ಯ ಮುಖ್ಯ ಪರೀಕ್ಷೆಯಲ್ಲಿ ಯಾವುದೇ ರೀತಿಯ ಅಕ್ರಮ ನಡೆದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗ ( ಕೆಪಿಎಸ್‌ಸಿ) ಸ್ಪಷ್ಟಪಡಿಸಿದೆ.

ಒಂದೇ ಕೊಠಡಿಯಲ್ಲಿ ಮುಖ್ಯ ಪರೀಕ್ಷೆ ಬರೆದ ಅಭ್ಯರ್ಥಿಗಳು ಸಂದರ್ಶನಕ್ಕೆ (ವೈವೋ) ಆಯ್ಕೆಯಾಗಿದ್ದಾರೆ ಎಂದು ಕೆಲವು ಅಭ್ಯರ್ಥಿಗಳು ಆಕ್ಷೇಪ ವ್ಯಕ್ತಪಡಿಸಿ ಇದರಲ್ಲಿ ದೊಡ್ಡಮಟ್ಟದ ಆಕ್ರಮ ನಡೆದಿದೆ ಎಂದು ಆರೋಪಿಸಿದ್ದರು. ತಕ್ಷಣವೇ ಎಚ್ಚೆತ್ತುಕೊಂಡ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು, ಆರೋಪ ಕುರಿತು ಕೂಡಲೇ ಸಮಗ್ರ ವರದಿ ನೀಡುವಂತೆ ಕೆಪಿಎಸ್‌ಸಿ ಕಾರ್ಯದರ್ಶಿ ಜ್ಯೋತಿ ಅವರಿಗೆ ಕಟ್ಟು ನಿಟ್ಟಿನ ಸೂಚನೆ ನೀಡಿದ್ದರು.

ಮುಖ್ಯ ಕಾರ್ಯದರ್ಶಿಗಳ ಸೂಚನೆ ಮೇರೆಗೆ ವರದಿ ಸಲ್ಲಿಸಿರುವ ಕೆಪಿಎಸ್‌ಸಿ ಕಾರ್ಯದರ್ಶಿ ಜ್ಯೋತಿ ಅವರು, ಮುಖ್ಯ ಪರೀಕ್ಷೆಯ ವೇಳೆ ಯಾವುದೇ ರೀತಿಯ ಅಕ್ರಮ ನಡೆದಿಲ್ಲ. ಎಲ್ಲವೂ ಪಾರದರ್ಶಕವಾಗಿ ನಡೆದಿದ್ದು, ಅಭ್ಯರ್ಥಿಗಳು ಅನಗತ್ಯವಾಗಿ ಗೊಂದಲ ಸೃಷ್ಟಿ ಮಾಡಿಕೊಂಡಿದ್ದಾರೆಂದು ಸರ್ಕಾರಕ್ಕೆ ವರದಿ ನೀಡಿದ್ದಾರೆ ಎಂದು ಗೊತ್ತಾಗಿದೆ.

ವರದಿಯಲ್ಲಿ ಪ್ರಮುಖವಾಗಿ ಮೂರು ವಿಷಯಗಳನ್ನು ಸ್ಪಷ್ಟಪಡಿಸಲಾಗಿದೆ. ಮೊದಲನೆಯದಾಗಿ, ಒಂದೇ ಕೊಠಡಿಯಿಂದ 15 ಜನ ಅಭ್ಯರ್ಥಿಗಳು ಉತ್ತೀರ್ಣ ಆಗಿದ್ದಾರೆ ಎಂಬ ಆರೋಪ ಸತ್ಯವಲ್ಲ ಎಂದು ದೃಡಪಡಿಸಲಾಗಿದೆ. ಆ ಕೊಠಡಿಯಿಂದ 15 ಜನ ಅಲ್ಲ, 11 ಜನ ಮಾತ್ರ ಉತ್ತೀರ್ಣರಾಗಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಸಾಮಾನ್ಯವಾಗಿ ಹಲವು ಪ್ರತಿಭಾವಂತ ಅಭ್ಯರ್ಥಿಗಳು



ಇದ್ದರೆ ಒಂದೇ ಸ್ಥಳದಿಂದ ಹೆಚ್ಚು ಮಂದಿ ಉತ್ತೀರ್ಣ ಆಗುವುದು ಅಸಾಧಾರಣ ವಿಷಯವಲ್ಲ ಎಂದು ಹೇಳಲಾಗಿದೆ.

ಎರಡನೆಯದಾಗಿ, ಪರೀಕ್ಷೆಯಲ್ಲಿ ಯಾವುದೇ ರೀತಿಯ ಅಕ್ರಮ ನಡೆದಿಲ್ಲ ಎಂಬುದನ್ನು ದೃಢಪಡಿಸಲು ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಲಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಅನುಮಾನ ವ್ಯಕ್ತವಾದ ಪರೀಕ್ಷಾ ಕೊಠಡಿಗಳ ದೃಶ್ಯಗಳನ್ನು ಸಂಪೂರ್ಣವಾಗಿ ಪರಿಶೀಲನೆ ಮಾಡಲಾಗಿದ್ದು, ಪರೀಕ್ಷೆಯ ವೇಳೆ ಯಾವುದೇ ಅಕ್ರಮ ಅಥವಾ ಅನುಮಾನಾಸ್ಪದ ಚಟುವಟಿಕೆಗಳು ಕಂಡುಬಂದಿಲ್ಲ ಎಂದು ತಿಳಿಸಲಾಗಿದೆ.

ಮೂರನೆಯದಾಗಿ, ಇದುವರೆಗೆ ಯಾವುದೇ ಅಭ್ಯರ್ಥಿ ಅಥವಾ ವ್ಯಕ್ತಿ ನೇರವಾಗಿ ಕೆಪಿಎಸ್ ಗೆ ಬಂದು ಅಧಿಕೃತ ದೂರು ಸಲ್ಲಿಸಿಲ್ಲ ಎಂದು ವರದಿಯಲ್ಲಿ ಹೇಳಲಾಗಿದೆ.ಸಾಮಾಜಿಕ ಜಾಲತಾಣಗಳಲ್ಲಿ ಆರೋಪಗಳು ಕೇಳಿಬಂದಿದ್ದರೂ, ಅಧಿಕೃತವಾಗಿ ದೂರು ನೀಡಿದವರು ಯಾರೂ ಇಲ್ಲ ಎಂದು ಕಾರ್ಯದರ್ಶಿ ಸ್ಪಷ್ಟಪಡಿಸಿದ್ದಾರೆ. ಈ ಮೂಲಕ ಕೆಪಿಎಸ್‌ಸಿ ವರದಿಯಲ್ಲಿ ಕೆಎಎಸ್ ಪರೀಕ್ಷೆಯಲ್ಲಿ ಗುರುತರ ಅಕ್ರಮ ನಡೆದಿದೆ ಎಂಬ ಆರೋಪಗಳು ನಿರಾಧಾರ ಎಂದು ಪರೋಕ್ಷವಾಗಿ ವಾದಿಸಲಾಗಿದೆ. ಆದ್ದರಿಂದ ಈ ಹಂತದಲ್ಲಿ ತನಿಖೆಗೆ ಪ್ರತ್ಯೇಕ ಸಮಿತಿ ರಚಿಸುವ ಅವಶ್ಯಕತೆ ಇಲ್ಲ ಎಂಬ ಅಭಿಪ್ರಾಯವನ್ನು ವರದಿಯಲ್ಲಿ ವ್ಯಕ್ತಪಡಿಸಲಾಗಿದೆ ಎಂದು ತಿಳಿದುಬಂದಿದೆ.

ಆದರೆ ಅಂತಿಮ ನಿರ್ಧಾರ ರಾಜ್ಯ ಸರ್ಕಾರದ ಕೈಯಲ್ಲಿದೆ. ಸರ್ಕಾರ ಈ ವರದಿಯನ್ನು ಪರಿಶೀಲಿಸಿದ ಬಳಿಕ ಮುಂದಿನ ಕ್ರಮವನ್ನು ಕೈಗೊಳ್ಳಲಿದೆ. ಕೆಲವು ಮೂಲಗಳ ಪ್ರಕಾರ, ಸಾರ್ವಜನಿಕರಲ್ಲಿ ಮೂಡಿರುವ ಅನುಮಾನಗಳನ್ನು ನಿವಾರಿಸಲು ಸರ್ಕಾರ ಪ್ರತ್ಯೇಕ ತನಿಖಾ ಸಮಿತಿ ರಚಿಸುವ ಸಾಧ್ಯತೆಯೂ ಇದೆ. ಮತ್ತೊಂದೆಡೆ ಕೆಪಿಎಸ್‌ಸಿ ವರದಿಯನ್ನು ಆಧಾರವಾಗಿಸಿಕೊಂಡು ಯಾವುದೇ ಅಕ್ರಮವಾಗಿಲ್ಲ ಎಂದು ಸರ್ಕಾರ ಹೇಳುವ ಸಾಧ್ಯತೆಯೂ ಇದೆ.

ಇತ್ತೀಚೆಗೆ ಕೆಎಎಸ್ ಫಲಿತಾಂಶ ಪ್ರಕಟವಾದ ನಂತರ ಸಾಮಾಜಿಕ ಜಾಲತಾಣಗಳಲ್ಲಿ ಹಲವು ಅನುಮಾನಗಳು ವ್ಯಕ್ತವಾಗಿದ್ದವು. ವಿಶೇಷವಾಗಿ ಒಂದೇ ಪರೀಕ್ಷಾ ಕೇಂದ್ರದ ಒಂದೇ ಕೊಠಡಿಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿಗಳು ಉತ್ತೀರ್ಣರಾಗಿದ್ದಾರೆ ಎಂಬ ಆರೋಪಗಳು ಕೇಳಿಬಂದಿದ್ದವು. ಕೆಲವು ಮಂದಿ "ಒಂದೇ ಕೊಠಡಿಯಿಂದ 15 ಜನ ಪಾಸ್ ಆಗಿದ್ದಾರೆ ಎಂದು ಹೇಳಿ ಪ್ರಶ್ನೆ ಎತ್ತಿದ್ದರು.

# ರಾಜ್ಯಸಭೆ ಚುನಾವಣೆ : ಅಭಿಷೇಕ್ ಮನುಸಿಂಗ್ವಿ ಸೇರಿ 6 ಮಂದಿ ಅಭ್ಯರ್ಥಿಗಳ ಪಟ್ಟಿ ಘೋಷಿಸಿದ ಕಾಂಗ್ರೆಸ್

**ಬೆಂಗಳೂರು, ಮಾ.5–** ವಕೀಲ ಅಭಿಷೇಕ್ ಮನುಸಿಂಗ್ವಿ ಸೇರಿದಂತೆ ಆರು ಮಂದಿ ರಾಜ್ಯಸಭೆ ಚುನಾವಣೆಗೆ ಸ್ಪರ್ಧಿಸಲು ಕಾಂಗ್ರೆಸ್ ಹೈಕಮಾಂಡ್ ಅವಕಾಶ ಕಲ್ಪಿಸಿದೆ.ಛತ್ತಿಸ್‌ಗಡದ ಮಹಿಳಾ ಕಾಂಗ್ರೆಸ್‌ನ ಅಧ್ಯಕ್ಷೆ ಫುಲೋದೇವಿ ನೇತಂ, ಹರಿಯಾಣದ ದಲಿತ ಚಳುವಳಿಗಾರ ಕರ್ಮವೀರ ಸಿಂಗ್ ಬುದ್ಧ, ಕಿರುತೆರೆಯ ನಟ ಉತ್ತರ ಪ್ರದೇಶ ಮೂಲದ ಅನುರಾಗ್ ಶರ್ಮ, ತಮಿಳುನಾಡಿನ ಕ್ರಿಸ್ಟೋಫರ್ ತಿಲಕ್, ತೆಲಂಗಾಣದ ವೇಮ್ ನರೇಂದ್ರ ರೆಡ್ಡಿ ಅವರಿಗೆ ರಾಜ್ಯಸಭೆ ಚುನಾವಣೆಗೆ ಸ್ಪರ್ಧಿಸಲು ಅವಕಾಶ ಕಲ್ಪಿಸಲಾಗಿದೆ.

ತೆಲಂಗಾಣದಲ್ಲಿ ರಾಜ್ಯಸಭೆಯ ಎರಡು ಸ್ಥಾನಗಳ ತೆರುವಾಗಿದೆ. ಅಭಿಷೇಕ್ ಮನುಸಿಂಗ್ವಿ ಅವರ ಅವಧಿ ಏ.9ಕ್ಕೆ ಮುಕ್ತಾಯವಾಗುತ್ತದೆ. ಮತ್ತೆ ತೆಲಂಗಾಣದಿಂದಲೇ ಅಭಿಷೇಕ್ ಸಿಂಗ್ವಿ ಅವರನ್ನು ಪುನರ್ ಆಯ್ಕೆಯಾಗಲು ಕಾಂಗ್ರೆಸ್ ಅವಕಾಶ ಕಲ್ಪಿಸಿದೆ.ತೆಲಂಗಾಣ ಮುಖ್ಯಮಂತ್ರಿ ಅವರ ಸಲಹೆಗಾರರಾಗಿರುವ ಮಾಜಿ ಶಾಸಕ ವೇಮ್ ನರೇಂದ್ರ ರೆಡ್ಡಿ ಅವರಿಗೆ ಬಿಆರ್‌ಎಸ್ ಪಕ್ಷದ ಕೆ.ಆರ್.ಸುರೇಶ್ ರೆಡ್ಡಿ ಅವರ ನಿವೃತ್ತಿಯಿಂದ ತೆರವಾಗುತ್ತಿರುವ ಸ್ಥಾನದಲ್ಲಿ ಸ್ಪರ್ಧಿಸಲು ಅವಕಾಶ ಕಲ್ಪಿಸಲಾಗುತ್ತಿದೆ.

ಮಹಾರಾಷ್ಟ್ರ, ಒಡಿಸಾ, ತಮಿಳುನಾಡು, ಪಶ್ಚಿಮ ಬಂಗಾಳ, ಅಸ್ಸಾಂ, ಬಿಹಾರ, ಛತ್ತಿಸ್‌ಗಡ, ಹರಿಯಾಣ, ಹಿಮಾಚಲ ಪ್ರದೇಶ, ತೆಲಂಗಾಣ ಸೇರಿ 10 ರಾಜ್ಯಗಳಿಂದ 37 ರಾಜ್ಯಸಭಾ



ಸ್ಥಾನಗಳಿಗೆ ಮಾ.16ರಂದು ದ್ವೈವಾರ್ಷಿಕ ಚುನಾವಣೆ ನಡೆಯುತ್ತಿದೆ. ಫೆ.26ರಿಂದ ಅಧಿಸೂಚನೆ ಜಾರಿಯಾಗಿದ್ದು, ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನವಾಗಿದೆ. ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

ಛತ್ತಿಸ್‌ಗಡ ರಾಜ್ಯದಿಂದ ಅಭ್ಯರ್ಥಿಯಾಗುತ್ತಿರುವ ಫುಲೋದೇವಿ ನೇತಂ ಅವರು ಬಿಜೆಪಿಯ ಹಿಂದುಳಿದ ನಾಯಕಿಯಾಗಿರುವ ಲಕ್ಷ್ಮಿವರ್ಮ ಅವರೊಂದಿಗೆ ರಾಜ್ಯಸಭಾ ಸ್ಥಾನಕ್ಕಾಗಿ ಪೈಪೋಟಿ ನಡೆಸಲಿದ್ದಾರೆ.

ಹರಿಯಾಣ ರಾಜ್ಯದಲ್ಲಿ ಕರ್ಮವೀರಸಿಂಗ್ ವಿರುದ್ಧ ಪ್ರಭಾವಿ ದಲಿತ ನಾಯಕರಾಗಿದ್ದು, ಅವರಿಗೆ ಅವಕಾಶ ಕಲ್ಪಿಸುವ ಮೂಲಕ ಕಾಂಗ್ರೆಸ್ ಪಕ್ಷ ಸಾಮಾಜಿಕ ನ್ಯಾಯವನ್ನು ಪಾಲನೆ ಮಾಡುವ ಪ್ರಯತ್ನ ನಡೆಸಿದೆ.ಹಿಮಾಚಲ ಪ್ರದೇಶದಿಂದ ಉತ್ತರಪ್ರದೇಶ ಮೂಲದ ಅನುರಾಗ್ ಶರ್ಮ ಅವರನ್ನು ಗೆಲಿಸುವ ಪ್ರಯತ್ನ ನಡೆಸಲಾಗಿದೆ.

ಕಿರುತೆರೆ ದಾರವಾಹಿಗಳ ಮೂಲಕ ಜನಪ್ರಿಯತೆ ಪಡೆದಿರುವ ಅನುರಾಗ್ ಶರ್ಮ ಕಂಗ್ರ ಜಿಲ್ಲಾ ಕಾಂಗ್ರೆಸ್‌ನ ಅಧ್ಯಕ್ಷರಾಗಿಯೂ ಕೆಲಸ ಮಾಡುತ್ತಿದ್ದಾರೆ. ಹಿಮಾಚಲ ಪ್ರದೇಶದಲ್ಲಿ ಕಾಂಗ್ರೆಸ್ ಸರ್ಕಾರ ಇರುವ ಹಿಮಾಚಲ ಪ್ರದೇಶದಲ್ಲಿ ಸುಲಭದ ಗೆಲುವಿನ ಹಿನ್ನೆಲೆಯಲ್ಲಿ ಅನುರಾಗ್ ಶರ್ಮ ಅವರನ್ನು ಕಣಕ್ಕಿಳಿಸಲಾಗಿದೆ.

ತಮಿಳುನಾಡಿನಲ್ಲಿ ಡಿಎಂಕೆ–ಕಾಂಗ್ರೆಸ್ ಮೈತ್ರಿ ಸರ್ಕಾರಗಳು ಆಡಳಿತದಲ್ಲಿದ್ದು, ಇದೇ ವರ್ಷ ಅಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ಡಿಎಂಕೆ, ಕಾಂಗ್ರೆಸ್ ಪಕ್ಷಕ್ಕೆ ರಾಜ್ಯಸಭಾ ಸ್ಥಾನ ಬಿಟ್ಟುಕೊಟ್ಟಿದ್ದು ಕ್ರಿಸ್ಟೋಫರ್ ತಿಲಕ್‌ರನ್ನು ಕಣಕ್ಕಿಳಿಸಲಾಗುತ್ತಿದೆ.ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರ ಆದೇಶದ ಮೇರೆಗೆ 6 ಮಂದಿ ಅಭ್ಯರ್ಥಿಗಳನ್ನು ಘೋಷಿಸುತ್ತಿರುವುದಾಗಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ತಿಳಿಸಿದ್ದಾರೆ.

# ಈರುಳ್ಳಿ ದರ ಪಾತಾಳಕ್ಕೆ: ರೈತ ಸಂಘದ ಆಕ್ರೋಶ, ಸರ್ಕಾರಕ್ಕೆ ಚೂನಪ್ಪ ಪೂಜಾರಿ ಒತ್ತಾಯ

**ಕೊಲ್ಹಾರ: ಮಾ.5:**ಈರುಳ್ಳಿ ದರದ ಭಾರಿ ಕುಸಿತದಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಡಲೇ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಈರುಳ್ಳಿ ಬೆಲೆಯನ್ನು ಹೆಚ್ಚಿಸಿ ರೈತರನ್ನು ರಕ್ಷಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ತಾಲ್ಲೂಕಿನ ಮಟ್ಟಿಹಾಳ ಗ್ರಾಮದ ರೈತ ಮಂಜುನಾಥರ ಈರುಳ್ಳಿ ಜಮೀನಿಗೆ ಭೇಟಿ ನೀಡಿದ ಅವರು, ಮಂಜುನಾಥರು ಉತ್ತಮ ಇಳುವರಿ ಪಡೆದಿದ್ದರೂ ಬೆಲೆ ಕುಸಿತದಿಂದಾಗಿ ಭಾರಿ ನಷ್ಟ ಅನುಭವಿಸುತ್ತಿದ್ದಾರೆ ಎಂದರು. “10 ಕ್ವಿಂಟಲ್ ಈರುಳ್ಳಿಯನ್ನು ಕೇವಲ 800 ರೂಪಾಯಿ ಪ್ರತಿ ಕ್ವಿಂಟಲ್‌ಗೆ ಮಾರಾಟ ಮಾಡಬೇಕಾಯಿತು. ಪ್ರತಿ ಕೆಜಿಗೆ 20–30 ರೂಪಾಯಿ ಬೆಲೆ ಸಿಗಬೇಕಾದರೂ ಈಗ 8 ರೂಪಾಯಿಗೂ ಕಡಿಮೆಯಾಗಿದೆ. ಒಂದು ಎಕರೆ ಈರುಳ್ಳಿ ಬೆಳೆಯಲು ಸುಮಾರು ಒಂದು ಲಕ್ಷ ರೂಪಾಯಿ ಖರ್ಚಾಗುತ್ತದೆ. ಇಂತಹ ಸ್ಥಿತಿಯಲ್ಲಿ ರೈತರು ಹೇಗೆ ಬದುಕಬೇಕು?” ಎಂದು ಪ್ರಶ್ನಿಸಿದರು.

ಈರುಳ್ಳಿ ಬೆಳೆಗಾರರ ಸಂಕಷ್ಟವನ್ನು ಗಮನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲರು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. “ಕಬ್ಬು ಬೆಳೆಗಾರರನ್ನು ರಕ್ಷಿಸಿದಂತೆ ಈರುಳ್ಳಿ ಬೆಳೆಗಾರರನ್ನೂ ರಕ್ಷಿಸಬೇಕು. ಈರುಳ್ಳಿಗೆ ಕನಿಷ್ಠ ಬೆಲೆ ನಿಗದಿಪಡಿಸಿ ರೈತರನ್ನು ಕಾಪಾಡಬೇಕು” ಎಂದು ಆಗ್ರಹಿಸಿದರು.

ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ ಮಹೇಶ ಸುಬೇದಾರ ಮಾತನಾಡಿ, ಈ ಭಾಗದಲ್ಲಿ ಅತಿ ಹೆಚ್ಚು ಈರುಳ್ಳಿ ಬೆಳೆಯಲಾಗುತ್ತದೆ ಆದರೆ ಯೋಗ್ಯ ಬೆಲೆ ಸಿಗುತ್ತಿಲ್ಲ ಎಂದರು. ಖರೀದಿದಾರರು ಏಕಾಏಕಿ ದರ ಕಡಿಮೆ ಮಾಡುವುದು ವರ್ಷಗಳಿಂದ ನಡೆಯುತ್ತಿದೆ ಎಂದು ಆರೋಪಿಸಿದರು. “ಪ್ರತಿ ಕೆಜಿಗೆ ಕನಿಷ್ಠ 20 ರೂಪಾಯಿ ಬೆಲೆ ಕೊಡಲೇಬೇಕು. ಇಲ್ಲದಿದ್ದರೆ ರೈತರು ಬದುಕಲು ಸಾಧ್ಯವಿಲ್ಲ. ಸರ್ಕಾರವೇ ರೈತರಿಂದ ನೇರವಾಗಿ ಖರೀದಿ ಮಾಡಬೇಕು” ಎಂದು ಒತ್ತಾಯಿಸಿದರು. ಸಚಿವ ಶಿವಾನಂದ ಪಾಟೀಲರು ವಿಜಯಪುರ ಜಿಲ್ಲೆಯವರಾಗಿರುವುದರಿಂದ ಈ ಭಾಗದ ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದು ಹೇಳಿದರು.


ಈ ಸಂದರ್ಭದಲ್ಲಿ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಸೋಮು ಬಿರಾದಾರ, ಗೋಪಾಲ ಕಾಖಂಡಕಿ, ಕಲ್ಲಪ್ಪ ಗಿಡ್ಡಪ್ಪಗೋಳ, ಶ್ರೀಶೈಲ ಬಾಡಗಿ, ಮುದಕಣ್ಣ ಚಲವಾದಿ, ಸತ್ಯಪ್ಪ ಕುಳ್ಳೊಳ್ಳಿ, ಯಲ್ಲಪ್ಪ ಗೂಳಗೊಂಡ ಸೇರಿದಂತೆ ಹಲವು ರೈತರು ಉಪಸ್ಥಿತರಿದ್ದರು.ಈರುಳ್ಳಿ ಮಾರುಕಟ್ಟೆಯಲ್ಲಿ ದರ ಕುಸಿತ ಮುಂದುವರಿದ ಹಿನ್ನೆಲೆಯಲ್ಲಿ ಬೆಳೆಗಾರರು ತೀವ್ರ ಆತಂಕ



ವ್ಯಕ್ತಪಡಿಸಿದ್ದಾರೆ. ಉತ್ಪಾದನಾ ವೆಚ್ಚ ಏರಿಕೆಯಾಗಿದ್ದರೂ ಮಾರಾಟದ ಸಮಯದಲ್ಲಿ ಕಡಿಮೆ ಬೆಲೆ ಸಿಗುತ್ತಿರುವುದು ರೈತರ ಆರ್ಥಿಕ ಸ್ಥಿತಿಗೆ ಹೊಡೆತ ನೀಡಿದೆ. ಸರಕಾರವು ಬೆಲೆ ನಿಯಂತ್ರಣ ಕ್ರಮ ಜಾರಿಗೆ ತಂದು, ಸಂಗ್ರಹಣೆ ಹಾಗೂ ನೇರ ಖರೀದಿ ವ್ಯವಸ್ಥೆ ರೂಪಿಸಬೇಕು ಎಂದರು,

ರೈತ ಸಂಘದ ತಾಲ್ಲೂಕು ಅಧ್ಯಕ್ಷ ಸೋಮು ಬಿರಾದಾರ,

# ಭ್ರಷ್ಟ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ದಾಳಿ





ಬೆಂಗಳೂರು,ಮಾ.4–ಭ್ರಷ್ಟ ಅಧಿಕಾರಿಗಳ ವಿರುದ್ಧದ ಬೇಟೆಯನ್ನು ಮುಂದುವರೆಸಿರುವ ಲೋಕಾಯುಕ್ತ ಅಧಿಕಾರಿಗಳು ಬೆಂಗಳೂರು, ಮೈಸೂರು, ಹಾಸನ, ಮಂಡ್ಯ, ಗದಗ, ಯಾದಗಿರಿ, ಹುಬ್ಬಳ್ಳಿ, ವಿಜಯಪುರ ಮತ್ತು ಬಾಗಲಕೋಟೆ ಸೇರಿ ಹಲವೆಡೆ ಏಕಕಾಲದಲ್ಲಿ ದಾಳಿ ಕೈಗೊಂಡು 10 ಮಂದಿ ಭ್ರಷ್ಟ ಅಧಿಕಾರಿಗಳನ್ನು ಬಲೆಗೆ ಕೆಡವಿದ್ದಾರೆ.

ಆದಾಯಕ್ಕಿಂತ ನೂರಾರು ಪಟ್ಟು ಅಕ್ರಮ ಆಸ್ತಿಗಳಿಕೆಯ ದೂರುಗಳ ಹಿನ್ನೆಲೆಯಲ್ಲಿ ಹಿರಿಯ ಇಂಜಿನಿಯರ್‌ಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳ ನಿವಾಸ ಹಾಗೂ ಕಚೇರಿಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಕೋಟ್ಯಂತರ ಮೌಲ್ಯದ ನಗದು,ಚಿನ್ನಾಭರಣಗಳು, ಐಷಾರಾಮಿ ವಸ್ತುಗಳು ವಾಹನಗಳನ್ನು ಜಪ್ತಿ ಮಾಡಿ ದಾಖಲೆ ಪತ್ರಗಳಿಗೆ ಶೋಧ ಕೈಗೊಂಡಿದ್ದಾರೆ.

ಮಂಡ್ಯದ ಪಿಡಬ್ಲ್ಯೂಡಿ ಎಇಇ ಸತೀಶ್ ಅವರ ಕಚೇರಿ ಬಂದಿಗೌಡ ಬಡಾವಣೆಯ ಮನೆ , ಸೇರಿದಂತೆ ಒಟ್ಟು ನಾಲ್ಕು ಕಡೆ ದಾಳಿ ಮಾಡಿ ಶೋಧ ನಡೆಸಿದ್ದಾರೆ.

ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ (ಕೆಆರ್ ಡಿಸಿಎಲ್ ) ಮುಖ್ಯ ಎಂಜಿನಿಯರ್ ವಸಂತ ವಾಲಪ್ಪ ನಾಯಕ್ ಅವರ ಬಾಗಲಕೋಟೆಯಲ್ಲಿರುವ ಮನೆ ಮೇಲೆ ಹಾಗೂ ಸಹೋದರನ ಮನೆ ಮೇಲೆ ದಾಳಿ ನಡೆಸಲಾಗಿದೆ.

ಬಾಗಲಕೋಟೆ ತಾಲ್ಲೂಕಿನ ಬಿಲ್ ಕೆರೂರ ಗ್ರಾಮದಲ್ಲಿನ ಮನೆ, ವಸಂತ ಅವರ ತಾಯಿ ವಾಸವಿರುವ ಬಸವ ನಗರದ ಮನೆ, ಬಾಗಲಕೋಟೆಯಲ್ಲಿರುವ ವಸಂತ ಸಹೋದರ ಭೀಮಸೇನ ನಾಯಕ ಮನೆ ಮೇಲೆಯೂ ದಾಳಿ ನಡೆಸಿ ದಾಖಲೆ, ಅಕ್ರಮ ಆಸ್ತಿಯ ಶೋಧ ನಡೆಸುತ್ತಿದ್ದಾರೆ.

ಲೋಕಾಯುಕ್ತ ಅಧಿಕಾರಿಗಳು ಮನೆ ಎದುರು ಬಂದು ನಿಂತರೂ ವಸಂತ ಕುಟುಂಬದವರು ಬಾಗಿಲು ತೆರೆಯಲಿಲ್ಲ, ನಂತರ ಅಧಿಕಾರಿಗಳು ಒತ್ತಡ ಹೇರಿ ಬಾಗಿಲು ತೆರೆಸಲಾಗಿದೆ.

ನಗರದ ಸಿಂಗನಾಯಕನ ಹಳ್ಳಿ ರೈತಸೇವಾ ಸಹಕಾರ ಸಂಘ ಯಲಹಂಕದ ಸಿಇಒ ಆರ್ ಶಶಿಧರ್ ಮನೆ ಮೇಲೆ, ಅಲ್ಲದೆ ಹೆಬ್ಬಾಳ ಪಶುವೈದ್ಯಕೀಯ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಎಚ್ ಸಿ ಇಂದ್ರೇಶ್ ಅವರ ಕಚೇರಿ ಮನೆ ಮೇಲೆ ದಾಳಿ ನಡೆಸಲಾಗಿದೆ. ಯಾಗಿರಿಯಲ್ಲಿ ಎಲೆಕ್ಟ್ರಿಕ್ ಡಿಪಾರ್ಟ್ ಮೆಂಟ್ ನ– ಉಪ ಎಲೆಕ್ಟ್ರಿಕಲ್ ಇನ್ಸ್ ಸ್ಪೆಕ್ಟರ್ ವೀರೇಶ್ ಹಿರೇಮಠ್ ಧಾರವಾಡದಲ್ಲಿ ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಇಲಾಖೆಯ ತಾಲೂಕು ಕಲ್ಯಾಣ ಅಧಿಕಾರಿ ಎಂಕೆ ಸುರಕೋಡ ಹಾಸನದಲ್ಲಿ ಮಹಾನಗರ ಪಾಲಿಕೆಯ ಎಇಇ ಎಮ್ ಸಿ ಸತ್ಯನಾರಾಯಣ ಮೈಸೂರಲ್ಲಿ ಜಲ ಭವನದ ಎಇಇ ಹಾಗೂ ಈ ಆಸಿಫ್ ಇಕ್ಬಾಲ್ವಿ ಜಯಪುರದ ಕೃಷ್ಣ ಭಾಗ್ಯ ಜಲನಿಗಮದ ಜೂನಿಯರ್ ಇಂಜಿನಿಯರ್ ಪ್ರಕಾಶ್ ಪಿಜಿ ಆಸ್ತಿ ಮೇಲೂ ಲೋಕಾಯುಕ್ತ ದಾಳಿಯಾಗಿದೆ.

ಲೋಕಾಯುಕ್ತ ದಾಳಿ ನಡೆದ ಗದಗ್ ನ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಂ.ಕೆ. ಸುರಕೋಡ್ ನಿವಾಸ.

ಹಾಸನ ಮಹಾನಗರ ಪಾಲಿಕೆಯ ಎಎಇ ಸತ್ಯನಾರಾಯಣ ಅವರ ರವೀಂದ್ರ ನಗರದ ನಿವಾಸಕ್ಕೆ ಲೋಕಾಯುಕ್ತ ಡಿವೈಎಸ್‌ಪಿ ಸುರೇಶ್ ನೇತೃತ್ವದ ತಂಡ ದಾಳಿ ಮಾಡಿದಾಗ, ಅಧಿಕಾರಿ ಬಾಗಿಲು ತೆಗೆಯಲು ನಿರಾಕರಿಸಿದ್ದಾರೆ.

ಸುಮಾರು ಅರ್ಧ ಗಂಟೆಗಳ ಕಾಲ ಬಾಗಿಲು ಬಡಿದರೂ ಒಳಗಿನಿಂದ ಯಾವುದೇ ಪ್ರತಿಕ್ರಿಯೆ ಬಾರದಿದ್ದಾಗ, ಲೋಕಾಯುಕ್ತ ಅಧಿಕಾರಿಗಳು ಚಾಣಾಕ್ಷತನ ಮೆರೆದರು. ಠಾಣೆಯ ಜೀಪ್ ಅನ್ನು ಮನೆಯ ಗೋಡೆಗೆ ಅಂಟಿಸಿ ನಿಲ್ಲಿಸಿ, ಅದರ ಮೇಲೆ ಹತ್ತಿ ಮೊದಲ ಮಹಡಿಯ ಮೂಲಕ ಮನೆಯೊಳಗೆ ಪ್ರವೇಶಿಸಿ ಸತ್ಯನಾರಾಯಣ ಅವರಿಗೆ ಶಾಕ್ ನೀಡಿದ್ದಾರೆ.

ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಕೆ.ಬಿ.ಜೆ.ಎನ್.ಎಲ್ ಜೂನಿಯರ್ ಇಂಜಿನಿಯರ್ ಪ್ರಕಾಶ್ ಪಿ.ಜಿ (ಗೊಡಬಂಡಿ) ಅವರ ಮೇಲೆ ನಡೆದ ದಾಳಿ ಕೂಡ ವಿಶೇಷವಾಗಿದೆ. ಪ್ರಕಾಶ್ ಅವರ ಇಂಡಿ ಕಚೇರಿ, ನಿವಾಸದ ಜೊತೆಗೆ ಬೆಂಗಳೂರಿನ ಮಹದೇವಪುರದಲ್ಲಿರುವ ಮನೆ ಹಾಗೂ ಬೀದರ್‌ನ ಹುಮನಾಬಾದ್‌ನಲ್ಲಿರುವ ಮನೆಯ ಮೇಲೆಯೂ ದಾಳಿ ನಡೆದಿದೆ. ವಿಶೇಷವೆಂದರೆ, ಇವರ ಪತ್ನಿಯ ಹೆಸರಿನಲ್ಲಿರುವ ಶಾಲೆಯ ಮೇಲೆಯೂ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಲಾಗಿದೆ.

ಬಲೆಗೆ ಬಿದ್ದವರು

ವಿರೇಶ ಹಿರೇಮಠ

ಉಪ ವಿದ್ಯುತ್ ಪರಿವೀಕ್ಷಕ ಜೆಸ್ಕಾಂ

ಯಾದಗಿರಿ

ಸತೀಶ್ ಎಎಇ, ಪಿಡಬ್ಲ್ಯೂಡಿ ಗದಗ

ಎಂ.ಕೆ. ಸುರಕೋಡ್ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಗದಗ

ಆಸೀಫ್ ಇಕ್ಬಾಲ್ ಹುಸೇನ್ ಎಎಇ, ನಗರ ನೀರು ಸರಬರಾಜು ಮಂಡಳಿ– ಮೈಸೂರು ಶಶಿಧರ್ ಸಿಇಒ, ರೈತ ಸೇವಾ ಸಹಕಾರ ಸಂಘ, ಯಲಹಂಕ

ಹೆಚ್.ಸಿ. ಇಂದ್ರೇಶ್ ಸಹಾಯಕ ಪ್ರಾಧ್ಯಾಪಕ, ಪಶುವೈದ್ಯಕೀಯ ಕಾಲೇಜು, ಹೆಬ್ಬಾಳ ಬೆಂಗಳೂರು

ದಾಳಿ ವೇಳೆ ಹಾವು

ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ (ಕೆಆರ್ ಡಿಸಿಎಲ್ ) ಮುಖ್ಯ ಎಂಜಿನಿಯರ್ ವಸಂತ ವಾಲಪ್ಪ ನಾಯಕ್ ಅವರ ಬಾಗಲಕೋಟೆಯ ಪೋಸ್ಟಲ್ ಕಾಲೋನಿಯ ಸಹೋದರ ಎಎಸ್ಐ ಭೀಮಸಿಂಗ್ ನಾಯಕ್ ಮನೆಯ ಮೇಲೆ ದಾಳಿ ದಾಳಿ ನಡೆಸಿದಾಗ ನೆಲಮಹಡಿಯಲ್ಲಿ ಹಾವು ಕಾಣಿಸಿಕೊಂಡಿದೆ.

ತಕ್ಷಣವೇ ಹಾವು ಹಿಡಿಯುವವರನ್ನು ಕರೆಸಿ ಹಾವು ಹಿಡಿದುಕೊಂಡು ಹೋದ ಬಳಿಕ ಶೋಧ ನಡೆಸಲಾಗಿದೆ.

ಸತಾಯಿಸಿದ ಅಧಿಕಾರಿಗೆ ಶಾಕ್_ ಹಾಸನ ಮಹಾನಗರ ಪಾಲಿಕೆಯ ಎಎಇ ಸತ್ಯನಾರಾಯಣ ಅವರ ರವಿಂದ್ರನಗರದ



ನಿವಾಸದ ಮೇಲೆ ದಾಳಿ ನಡೆಸಲು ಮುಂಜಾನೆ 5:30ರ ವೇಳೆ ಲೊಕಾ ಅಧಿಕಾರಿಗಳು ಧಾವಿಸಿದಾಗ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಬಾಗಿಲು ತೆರೆಯದೆ ಸತಾಯಿಸಲಾಗಿದೆ.

ಅಧಿಕಾರಿಗಳು ಮನೆ ಬೆಲ್ ಮಾಡಿ ಸೂಚನೆ ನೀಡಿದರೂ, ಮನೆಯೊಳಗಿನಿಂದ ಯಾರೂ ಪ್ರತಿಕ್ರಿಯಿಸದೇ ಬಾಗಿಲು ತೆರೆಯಲಿಲ್ಲ, ಮನೆಯಲ್ಲಿ ಲೈಟ್ ಆನ್ ಆಗಿ ಬಳಿಕ ಆಫ್ ಆದರೆ ಎಸಿ ಕೂಡ ಆನ್ ಆಗಿ ಆಫ್ ಆಗಿದೆ. ಒಳಗಿನಿಂದ ಯಾವುದೇ ಪ್ರತಿಕ್ರಿಯೆ ಬಾರದಿದ್ದಾಗ ಚಾಣಾಕ್ಷತನ ಮೆರೆದ ಅಧಿಕಾರಿಗಳು ಠಾಣೆಯ ಜೀಪ್ ಅನ್ನು ಮನೆಯ ಗೋಡೆಗೆ ಅಂಟಿಸಿ ನಿಲ್ಲಿಸಿ, ಅದರ ಮೇಲೆ ಹತ್ತಿ ಮೊದಲ ಮಹಡಿಯ ಮೂಲಕ ಮನೆಯೊಳಗೆ ಪ್ರವೇಶಿಸಿ ಸತ್ಯನಾರಾಯಣ ಅವರಿಗೆ ಶಾಕ್ ನೀಡಿದ್ದಾರೆ

# ರಾಜ್ಯ ಸರ್ಕಾರದ ಬಜೆಟ್ ನಲ್ಲಿ ದಲಿತರಿಗೆ ಶೇಕಡ 24.1ರಷ್ಟು ಹಣವನ್ನು ಮೀಸಲಿಡಲು ಒತ್ತಾಯ




**ಕಲಬುರಗಿ:ಮಾ.5:** ರಾಜ್ಯ ಸರ್ಕಾರದ ಬಜೆಟ್ ನಲ್ಲಿ ದಲಿತರಿಗೆ ಶೇಕಡ 24.1ರಷ್ಟು ಹಣವನ್ನು ಮೀಸಲಿಡಬೇಕೆಂದು ದಸಂಸ (ಲಕ್ಷ್ಮೀನಾರಾಯಣ ನಾಗವಾರ ಸ್ಥಾಪಿತ) ಒತ್ತಾಯಿಸಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಧರಣಿ ನಡೆಸಿ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಸಂವಿಧಾನವು "ಸಾಮಾಜಿಕ ನ್ಯಾಯ" ತತ್ವವನ್ನು ಸಂಪೂರ್ಣವಾಗಿ ಮಾನ್ಯ ಮಾಡಿರುವುದು ತಮಗೆ ತಿಳಿದ ವಿಷಯವೇ ಆಗಿದೆ. ರಾಜ್ಯದಲ್ಲಿ 'ಸಾಮಾಜಿಕ ನ್ಯಾಯ' ಈಡೇರಿಸಿರುವ ಜನಪ್ರಿಯ ಮತ್ತು ಬದ್ಧತೆ ಇರುವ ಮುಖ್ಯಮಂತ್ರಿ ಎಂದು ತಾವು ಖ್ಯಾತರಾಗಿರುತ್ತೀರಿ.

ಈ ಉರಣದಿಂದಲೇ ನಮ್ಮ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಲಕ್ಷ್ಮೀನಾರಾಯಣ ನಾಗವಾರ ಸ್ಥಾಪಿತ)ಯು ಸರ್ವಾನುಮತದಿಂದ 2023ರ ವಿಧಾನ ಸಭಾ ಚುನಾವಣೆಯಲ್ಲಿ ತಮ್ಮ ನೇತೃತ್ವದಲ್ಲಿ ಕಾಂಗ್ರೆಸ್‌ಗೆ ಬೆಂಬಲ ನೀಡಿತ್ತು. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶಾಖೆಗಳನ್ನು ಹೊಂದಿರುವ ನಮ್ಮ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ(ಲಕ್ಷ್ಮೀನಾರಾಯಣ ನಾಗವಾರ ಸ್ಥಾಪಿತ)ಯು ಪ್ರತಿಯೊಂದು ಕ್ಷೇತ್ರದಲ್ಲಿ ಕಾಂಗ್ರೆಸ್ ಪರವಾಗಿ ಮತಗಳು ಚಲಾದಾಕೆ ಆಗುವಂತೆ ನೋಡಿಕೊಂಡಿತು. ರಾಜ್ಯದ ದಲಿತ ಸಂಘಟನೆಗಳ ಈ ಕೊಡುಗೆಯನ್ನು ತಾವು ಕೂಡ ಬೆಂಗಳೂರಿನ ಪುರಭವನದಲ್ಲಿ ನಡೆಸಲಾದ ಸಮಾವೇಶದಲ್ಲಿ ಸ್ಮರಿಸಿರುತ್ತೀರಿ. ತಮ್ಮ ಆಡಳಿತಾವಧಿಯಲ್ಲಿ ರಾಜ್ಯದ ದಲಿತ, ಹಿಂದುಳಿದ, ಅಲ್ಪಸಂಖ್ಯಾತರ ಮತ್ತು ಸಮಸ್ತ ಶೋಷಿತ ಸಮುದಾಯಗಳ ಸರ್ವಾಂಗೀಣ ಪ್ರಗತಿ ಆಗಬೇಕಾದರೆ ತಾವು ಬಜೆಟ್‌ನಲ್ಲಿ ಶೇ.24.1 ರಷ್ಟು ಹಣವನ್ನು ಮೀಸಲಿಡಬೇಕು.

ಈ ಹಿನ್ನೆಲೆಯಲ್ಲಿ ಈ ಮನವಿಯಲ್ಲಿರುವ ಹಕ್ಕೊತ್ತಾಯಗಳನ್ನು ಆದ್ಯತೆಯ ಮೇಲೆ 2026–2027ರ ಬಜೆಟ್‌ನಲ್ಲಿ ಈಡೇರಿಸಬೇಕೆಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ(ಲಕ್ಷ್ಮೀನಾರಾಯಣ ನಾಗವಾರ ಸ್ಥಾಪಿತ)ಯು ಒತ್ತಾಯಿಸುತ್ತದೆ.

ಹಕ್ಕೊತ್ತಾಯಗಳು ಒಳಮೀಸಲಾತಿಯಲ್ಲಿ ಸೃಷ್ಟಿಯಾಗಿರುವ ರೋಸ್ಟರ್ ಬಿಂದು ಗೊಂದಲವನ್ನು ಸರಿಪಡಿಸಿ ಎಲ್ಲಾ 101 ಪರಿಶಿಷ್ಟ ಜಾತಿಗೂ ಅನ್ಯಾಯವಾಗದಂತೆ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಬೇಕು, ಹಾಸ್ಟೆಲ್‌ಗಳಿಗೆ ಪೀಠೋಪಕರಣಗಳು ಮತ್ತು ಪಾಠೋಪಕರಣಗಳು ಸಮರ್ಪಕವಾಗಿ ಪೂರೈಕೆಯಾಗಬೇಕು ಹಾಗೂ ನಿರಂತರವಾಗಿ ಪಾಠ ಏರ್ಪಾಡಾಗಬೇಕು, ಹಾಸ್ಟೆಲ್ ಬಯಸಿ ಅರ್ಜಿ ಸಲ್ಲಿಸುವ ಎಲ್ಲಾ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡಬೇಕು, ರಾಜ್ಯದಲ್ಲಿ ನಾಗರೀಕ ಹಕ್ಕುಗಳ ರಕ್ಷಣೆ ಕಾಯಿದೆ ಮತ್ತು ದೌರ್ಜನ್ಯ ತಡೆ ಕಾಯ್ದೆಗಳ ಅನುಷ್ಠಾನ ಸಮರ್ಪಕವಾಗಿ ಆಗುತ್ತಿಲ್ಲ. ಅಪರಾಧಗಳ ಪತ್ತೆ ಮತ್ತು ವಿಚಾರಣೆ ಸರಿಯಾಗಿ ನಡೆದು ರಕ್ಷಣೆಯಾಗುವ ಪ್ರಮಾಣ ಸರಿಯಾಗಿ ಆಗುವಂತೆ ನಿಗಾವಹಿಸಲು ಪ್ರತ್ಯೇಕ ಸಮಿತಿಯನ್ನು ಸ್ಥಾಪಿಸಬೇಕು.

ಪ್ರತಿ ಗ್ರಾಮದಲ್ಲಿ ದಲಿತರಿಗೆ ಸ್ಮಶಾನ ಭೂಮಿ ಮೀಸಲಿರಿಸಬೇಕು, ಎಸ್.ಸಿ/ಎಸ್.ಟಿ ಮೀಸಲಾತಿಗೆ ನಿಗಧಿಪಡಿಸಿರುವ ಆದಾಯಮಿತಿ ವಾರ್ಷಿಕ ಹದಿನೈದು(15) ಲಕ್ಷಕ್ಕೆ ಏರಿಸಬೇಕು,

ಅರ್ಚಕ ಮತ್ತು ಪೌರಕಾರ್ಮಿಕ ವೃತ್ತಿಯನ್ನು ಸಾರ್ವತ್ರಿಕಗೊಳಿಸಬೇಕು. ಈ ಎರಡು ವೃತ್ತಿಗಳಲ್ಲಿ ಮೀಸಲಾತಿ ನೀತಿಯನ್ನು ಅನುಷ್ಠಾನಕ್ಕೆ ತರಬೇಕು. ಹಂಗಾಮಿ ಪೌರಕಾರ್ಮಿಕರನ್ನು ಖಾಯಂಗೊಳಿಸಬೇಕು, ಖಾಸಗಿ ಕ್ಷೇತ್ರಗಳಲ್ಲಿ ಸಾಮಾಜಿಕ ನ್ಯಾಯದ ಹಿನ್ನೆಲೆಯ ಮೀಸಲಾತಿಯನ್ನು ಜಾರಿಗೊಳಿಸಬೇಕು. ಎಸ್.ಸಿ/ಎಸ್.ಟಿ ಸಮುದಾಯ ಬ್ಯಾಕ್‌ಲ್ಯಾಗ್ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು. ಈ ಮೊದಲು ಫಾರಂ 57ಕ್ಕೆ ಹಾಕಿರುವವರಿಗೆ ಕೂಡಲೇ ಸಾಗುವಳಿ ಚೀಟಿ ಹಾಗೂ ಹಕ್ಕುಪತ್ರ ನೀಡಬೇಕು. ಫಾರಂ.57, ಅರ್ಜಿ ಸಲ್ಲಿಸಲು ಅವಕಾಶ ನೀಡಬೇಕು.

ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯಗಳ ನ್ಯಾಯಾಧೀಶರುಗಳ ನೇಮಕಾತಿಯಲ್ಲಿ ಮೀಸಲಾತಿಯನ್ನು ಅನುಸರಿಸುವುದಕ್ಕೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುವುದು, ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ನಿಗಮ ಮಂಡಳಿಗಳಿಗೆ ಸಾಲಕ್ಕಾಗಿ ಅರ್ಜಿ ಸಲ್ಲಿಸುವ ಎಸ್.ಸಿ/ಎಸ್.ಟಿ ಎಲ್ಲಾ ಅರ್ಹ ಫಲಾನುಭವಿಗಳಿಗೆ ಸಾಲ ಮಂಜೂರು ಮಾಡಬೇಕು, ವಿವಿಧ ವಸತಿ ಯೋಜನೆಯಡಿ ಅರ್ಹ ಬಡ ಫಲಾನುಭವಿಗಳಿಗೆ ಮನೆ ಮಂಜೂರು ಮಾಡಬೇಕು ಹಾಗೂ ಸಹಾಯ ಧನವನ್ನು 5 ಲಕ್ಷ ರೂ.ಗಳಿಗೆ ಹೆಚ್ಚಿಸಬೇಕು. ನಿರಾಶ್ರಿತರಿಗೆ ನಿವೇಶನ ಮತ್ತು ಹಕ್ಕುಪತ್ರ ನೀಡಿ ದಾಖಲೆ ಇಡಬೇಕು, ಉಡುಪಿ ಮತ್ತು ಮಂಗಳೂರು ಜಿಲ್ಲೆಗಳಲ್ಲಿ ಎಸ್.ಸಿ/ಎಸ್.ಟಿ ದವರಿಗೆ ಮೀಸಲಾಗಿರುವ ಡಿ.ಸಿ. ಮನ್ನಾ ಭೂಮಿಯನ್ನು ದಲಿತರಿಗೆ ಹಂಚಿಕೆ ಮಾಡಬೇಕು, ಭೂ ಒಡೆತನ ಯೋಜನೆಯಲ್ಲಿ ಸುಮಾರು ವರ್ಷದಿಂದ ಹಣ ಮೀಸಲಿಟ್ಟಿಲ್ಲ ಕೂಡಲೇ ಸರ್ಕಾರ ಈ ಯೋಜನೆಗೆ ಹಣವನ್ನು ಮಂಜೂರು ಮಾಡಬೇಕು.

ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸುರಕ್ಷಣಾ ಕಾಯ್ದೆ 2020, ಈ ಕೂಡಲೇ ರದ್ದು ಮಾಡಬೇಕು, ಎಸ್‌ಸಿಪಿಟಿಎಸ್‌ಪಿ ಹಣವನ್ನು ಬೇರೆ ಯೋಜನೆಗಳಿಗೆ ಬಳಸಬಾರದು ಹಾಗೂ ಈಗಾಗಲೇ ಬಳಸಿರುವ ಹಣವನ್ನು ವಾಪಸ್ ಎಸ್.ಸಿ/ಎಸ್.ಟಿಗಳ ಅಭಿವೃದ್ಧಿಗೆ ಮೀಸಲಿಡಬೇಕು, ಕೆಎಸ್‌ಎಫ್‌ಸಿ ಮತ್ತು ಬ್ಯಾಂಕ್ ಗಳಿಂದ ದಲಿತರಿಗೆ 4% ಬಡ್ಡಿಯಂತೆ 10 ಕೋಟಿ ರೂ.ವರೆಗೆ ಉದ್ಯಮ ನಡೆಸಲು ಸಾಲ ಸೌಲಭ್ಯ ನೀಡುವ ಯೋಜನೆಯಲ್ಲಿರುವ ಷರತ್ತುಗಳನ್ನು ಸಡಿಲಪಡಿಸಿ ನಗರ ಪ್ರದೇಶದಲ್ಲಿ ನಿವೇಶನ, ಮನೆ ಇತರೆ ಚರಾಸ್ತಿಗಳ ಕೋಲ್ಯಾಟರಲ್ ಇರಬೇಕು ಎಂಬ ನಿಯಮ ಸಡಿಲಪಡಿಸಬೇಕು. ಎಂದು ಮನವಿಯಲ್ಲಿ ತಿಳಿಸಿದಾರೆ.

ಈ ಸಮದರ್ಭದಲ್ಲಿ ಕಲಬುರಗಿ ವಿಭಾಗೀಯ ಸಂಘಟನಾ ಸಂಚಾಲಕ ಮಹಾದೇವ ಕೋಳಕೂರ, ಜಿಲ್ಲಾ ಸಂಚಾಲಕ ರಾಮಣ್ಣ ನೂಲಾ ಮೋಘಾ, ಜಿಲ್ಲಾ ಸಂ.ಸಂಚಾಲಕರಾದ ಸಾತಪ್ಪ ಆದ. ತೆಗನೂರ, ರಾಜಶೇಖರ ಎಸ್. ಪಡಸಾವಳಿ, ಜಿಲ್ಲಾ ಖಜಾಂಚಿ ನಾಗಪ್ಪ ವಳಕೇರಿ, ತಾಲೂಕಾ ಸಂಚಾಲಕ ವಿಶ್ವರಾಧ್ಯ ಗಂವ್ಹಾರ, ವಿದ್ಯಾರ್ಥಿ ಒಕ್ಕೂಟ ಸಂಚಾಲಕ ಗೌತಮ ಪಾಳಾ ಸೇರಿದಂತೆ ಕಾರ್ಯಕರ್ತರು ಇದ್ದರು.

## ರಂಜಾನ್ ಕರೀಮ್ ಗ್ರ್ಯಾಂಡ್ ಇಫ್ತಾರ್ ಕೂಟ: ಮಾಜಿ ಶಾಸಕ ಆನಂದ ನ್ಯಾಮಗೌಡ ಭಾಗಿ



**ಜಮಖಂಡಿ :ಮಾ.5:**ನಗರದ ದಾರೈನ್ ಮಹಿಳಾ ಶಿಕ್ಷಣ (ಬಿ.ಇಡ್) ಮಹಾವಿದ್ಯಾಲಯದಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಆಯೋಜಿಸಲಾದ ರಂಜಾನ್ ಕರೀಮ್ ಗ್ರ್ಯಾಂಡ್ ಇಫ್ತಾರ್ ಕೂಟದಲ್ಲಿ ಮಾಜಿ ಶಾಸಕ ಆನಂದ ನ್ಯಾಮಗೌಡ ಭಾಗವಹಿಸಿ ಸಮಸ್ತ ಮುಸ್ಲಿಂ ಸಮುದಾಯಕ್ಕೆ ಹೃತ್ಪೂರ್ವಕ ಶುಭಾಶಯಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಪವಿತ್ರ ರಂಜಾನ್ ಮಾಸದ 13ನೇ ಉಪವಾಸವನ್ನು ಆಚರಿಸುತ್ತಿರುವ ಮುಸ್ಲಿಂ ಬಾಂಧವರಿಗೆ ನನ್ನ ಹಾರ್ದಿಕ ಅಭಿನಂದನೆಗಳು. ರಂಜಾನ್ ಹಬ್ಬವು ಕೇವಲ ಭಾರತದಲ್ಲೇ ಅಲ್ಲದೆ ವಿಶ್ವದಾದ್ಯಂತ ಭಕ್ತಿಭಾವದಿಂದ ಆಚರಿಸಲ್ಪಡುವ ಮಹತ್ವದ ಹಬ್ಬವಾಗಿದೆ" ಎಂದರು.

ಮುಸ್ಲಿಂ ಬಾಂಧವರು ಬೆಳಗ್ಗಿನಿಂದ ಸಾಯಂಕಾಲದವರೆಗೆ ಉಪವಾಸವಿದ್ದು, ಇಫ್ತಾರ್ ಮೂಲಕ ಉಪವಾಸ ಮುಗಿಸುವುದು ಶ್ರದ್ಧೆ ಮತ್ತು ನಿಯಮಾಚಾರದ ಸಂಕೇತವಾಗಿದೆ. ಒಂದು ತಿಂಗಳ ಕಾಲ ನಡೆಯುವ ಈ ಉಪವಾಸವು ಆತ್ಮಶುದ್ಧಿ, ಶಿಸ್ತು ಹಾಗೂ ಸಮಾಜದ ಒಳಿತಿಗಾಗಿ ಪ್ರಾರ್ಥನೆಯ ಸಮಯವಾಗಿದೆ ಎಂದು ಹೇಳಿದರು.

ಹಿಂದೂ ಸಮಾಜದಲ್ಲಿ ಶ್ರಾವಣ ಮಾಸದಲ್ಲಿ ಉಪವಾಸ ಆಚರಿಸುವಂತೆ, ಮುಸ್ಲಿಂ ಸಮಾಜದವರು ರಂಜಾನ್ ಮಾಸದಲ್ಲಿ ದೇವರಲ್ಲಿ ಪ್ರಾರ್ಥನೆ ಸಲ್ಲಿಸುತ್ತಾರೆ. ಈ ಪವಿತ್ರ ಸಂದರ್ಭದಲ್ಲಿ ಎಲ್ಲರಿಗೂ ಆರೋಗ್ಯ, ಆಯುಷ್ಯ, ಸುಖ–ಶಾಂತಿ ದೊರಕಲಿ ಎಂದು ಪ್ರಾರ್ಥಿಸಿದರು.

ಸಂಸ್ಥೆಯ ಅಧ್ಯಕ್ಷ ಡಾ. ಸಯ್ಯದ ತೌಸಿಫ್ ಖಾದ್ರಿ ಅವರು ಉಪವಾಸ ಆಚರಿಸುತ್ತಿರುವ ಮುಸ್ಲಿಂ ಬಾಂಧವರಿಗಾಗಿ ಇಫ್ತಾರ್ ಕೂಟವನ್ನು ಆಯೋಜಿಸಿದ್ದು ಶ್ಲಾಘನೀಯ. ಅವರು ಇದೇ ರೀತಿಯಲ್ಲಿ ಸಮಾಜಮುಖಿ ಕಾರ್ಯಗಳನ್ನು ಮುಂದುವರಿಸಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಜವಳಿ ನಿಗಮದ ಮಾಜಿ ಉಪಾಧ್ಯಕ್ಷ ಹಾಗೂ ಅಂಜುಮನ್–ಇ–ಇಸ್ಲಾಂ ಸಮಿತಿಯ ಕಾರ್ಯಾಧ್ಯಕ್ಷ ನಜೀರ್ ಕಂಗನೋಳ್ಳಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾರೈನ್ ಗ್ರೂಪ್ ಅಧ್ಯಕ್ಷ ಡಾ. ತೌಸಿಫ್ ಖಾದ್ರಿ, ನಗರ ಯೋಜನೆ ಪ್ರಾಧಿಕಾರ ಅಧ್ಯಕ್ಷ ಅನ್ವರ್ ಮೋಮಿನ್, ನಗರಸಭೆ ಮಾಜಿ ಸದಸ್ಯ ಹಾಜಿ ಮುಬಾರಕ್ ಅಫ್ರಾದ್, ಅಲ್ಪಸಂಖ್ಯಾತ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಾದಿಕ್ ಬಂಟ್ನೂರು,ಹುಸೇನ್ ತಾಂಬೋಳಿ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE